MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 41 | ಶುಕ್ರವಾರ : 28-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 41 | FRIDAY : 28-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಸಿಎಂ-ಡಿಸಿಎಂಗೆ ಹೈಕಮಾಂಡ್‌ನಿಂದ ಕರೆ



**ಬೆಂಗಳೂರು, ನ.27–** ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಪ್ರಮುಖ ಮೂರ್‍ನಾಲ್ಕು ಮಂದಿಯನ್ನು ದೆಹಲಿಗೆ ಕರೆಸಿ ಚರ್ಚೆ ಮಾಡುತ್ತೇವೆ. ಮುಂದೆ ಯಾವ ರೀತಿ ನಡೆಯಬೇಕು ಎಂಬ ಸೂಚನೆ ನೀಡಿ, ಎಲ್ಲಾ ಗೊಂದಲಗಳನ್ನು ಬಗೆ ಹರಿಸುತ್ತೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಮಹತ್ವದ ಹೇಳಿಕೆ ನೀಡಿದ್ದಾರೆ.

ದೆಹಲಿಗೆ ತೆರಳುವ ಮುನ್ನ ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ದೆಹಲಿಗೆ ಹೋದ ಬಳಿಕ ಮೂರ್‍ನಾಲ್ಕು ಮಂದಿ ಪ್ರಮುಖರನ್ನು ಕರೆಸಿ ಮಾತನಾಡುತ್ತೇನೆ. ಆ ಚರ್ಚೆಯ ಬಳಿಕ ಮುಂದೆ ಯಾವ ರೀತಿ ನಡೆಯಬೇಕು ಎಂಬ ನಿರ್ದೇಶನ ನೀಡಲಾಗುವುದು. ಈ ಎಲ್ಲಾ ಗೊಂದಲಗಳಿಗೆ ತೆರೆ ಬೀಳಲಿದೆ ಎಂದು ಹೇಳಿದರು.ದೆಹಲಿಯಲ್ಲಿ ನಡೆಯುವ ಸಭೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಇತರ ಸದಸ್ಯರು,**(2ನೇಪುಟಕ್ಕೆ)**

## ಸೂರ್ಯ-ಚಂದ್ರ ಇರುವವರೆಗೂ ಭಾರತದ ಸಂವಿಧಾನ ಇರುತ್ತದೆ: ಪ್ರೊ.ಜೆ.ಎಸ್.ಪಾಟೀಲ

ಯುವಮಾರ್ಗ ಸುದ್ದಿ

**ರಾಯಚೂರು,ನ.27**–ಸೂರ್ಯ ಚಂದ್ರರಿರುವವರೆಗೂ ಭಾರತದ ಸಂವಿಧಾನ ಇರುತ್ತದೆ. ಇದೇ ಭಾರತದ ದೇಶದ ಭವಿಷ್ಯವಾಗಿದೆ ಎಂದು ಅಸ್ಸಾಂ ರಾಜ್ಯದ ಗೌಹಾಟಿಯ ಕೆಎಸ್‌ಎಲ್‌ಯು ಹಾಗೂ ನ್ಯಾಷನಲ್ ಕಾನೂನು ಶಾಲೆಯ ನಿವೃತ್ತ ಉಪ ಕುಲಪತಿಯಾದ ಪ್ರೊ.ಜೆ.ಎಸ್.ಪಾಟೀಲ ಅವರು ಹೇಳಿದರು.



ರಾಯಚೂರು ನ್ಯಾಯವಾದಿಗಳ ಸಂಘ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಂಯುಕ್ತಾಶ್ರಯದಲ್ಲಿ ನವೆಂಬರ್ 26ರಂದು ಸಂಜೆ ನಗರದ ಜಿಲ್ಲಾ ರಂಗಮಂದಿರದಲ್ಲಿ ನಡೆದ ಸಂವಿಧಾನ ಸಮರ್ಪಣಾ ದಿನಾಚರಣೆಯ ಮುಖ್ಯ ಭಾಷಣಕರರಾಗಿ ಅವರು ಮಾತನಾಡಿದರು.

ನಮ್ಮ ದೇಶದಲ್ಲಿ ಸಂವಿಧಾನ ರಚನಾ ಪ್ರಕ್ರಿಯೆಯು 1947ಕ್ಕಿಂತ ಮೊದಲೇ ನಡೆದಿತ್ತು. ಸಂವಿಧಾನ ರಚನೆಯು ಮಹತ್ತರ ಜವಾಬ್ದಾರಿಯನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರ ಹೆಗಲಿಗೆ ಹೊರಿಸಲಾಯಿತು. ಸಂವಿಧಾನವನ್ನು ಪ್ರತಿಯೊಬ್ಬರು ಓದಬೇಕು, ಅಧ್ಯಯನ ಮಾಡಬೇಕು. ಅಂದಾಗಲೇ ಸಂವಿಧಾನ ರಚನೆಯ ಸಂದರ್ಭದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಹಾಕಿದ ಶ್ರಮ ಎಷ್ಟಿತ್ತು ಎಂಬುದು ಪ್ರತಿಯೊಬ್ಬರಿಗೂ ಅರ್ಥವಾಗುತ್ತದೆ. ಸಂವಿಧಾನ ರಚನೆಗೆ ಸಂಬಂಧಿಸಿದಂತೆ ಡಾ.ಬಿ.ಆರ್.ಅಂಬೇಡ್ಕರ್ ಅವರು ನೀಡಿದ ಉತ್ತರ ಗಳನ್ನು ಓದುವಾಗ ಮೈನವಿರೇಳುತ್ತದೆ ಎಂದು ತಿಳಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂಸ್ಕೃತ ಭಾಷೆಯನ್ನು ಕಲಿತಿದ್ದರು. ಸಂಸ್ಕೃತವನ್ನು ಆಳವಾಗಿ ಅಧ್ಯಯನ ಮಾಡಿದ್ದರು. ಸಂವಿಧಾನ ರಚನೆಯ ವೇಳೆ ಅಲ್ಲಲ್ಲಿ ಸಂಸ್ಕೃತದ ಶ್ಲೋಕಗಳನ್ನು ಸೇರಿಸಿರುವುದು ಸಂವಿಧಾನದ ಹೆಚ್ಚುಗಾರಿಕೆಯಾಗಿದೆ. ಅಂಬೇಡ್ಕರ ಅವರು ಸಂವಿಧಾನವನ್ನು ಸಾಮಾಜಿಕ ಡಿಕ್ಷನರಿಯಂತೆ ರಚಿಸಿದರು. ಭಾರತದ ಸಂವಿಧಾನವು ವರ್ಣಿಸಲಸಾಧ್ಯ ವಿಷಯವಾಗಿದೆ. ಪ್ರಪಂಚದಲ್ಲಿ ಬೇರೆಲ್ಲಿಯೂ ನೋಡಲು ಸಿಗದ ಪ್ರಬಂಧವಾಗಿದೆ ಎಂದು ಸಂವಿಧಾನದ ಮಹತ್ವವನ್ನು ಬಣ್ಣಿಸಿದರು.

ಅಂಬೇಡ್ಕರ್ ಅವರು ಸಂವಿಧಾನ ರಚನೆಯ ಮೂಲಕ ಸಮಾಜದಲ್ಲಿನ ಅನ್ಯಾಯವನ್ನು ಸರಿಪಡಿಸುವ ಕಾರ್ಯ ಮಾಡಿದರು. ನಮ್ಮ ದೇಶದಲ್ಲಿ ಪಾರ್ಲಿಮೆಂಟ್‌ಗಿಂತ ಸಂವಿಧಾನವೇ ಸುಪ್ರೀಂ ಎಂಬುದನ್ನು ಪ್ರತಿಯೊಬ್ಬರು ಅರಿಯಬೇಕು. ಸಂವಿಧಾನಕ್ಕೆ ಧಕ್ಕೆ ತರುವಂತಹ ಸಂದರ್ಭಗಳು ಎದುರಾದಾಗ ಆ ವೇಳೆ ಸುಪ್ರೀಂ ಕೋರ್ಟ್ ಸಂವಿಧಾನವನ್ನು ರಕ್ಷಣೆ ಮಾಡಿದೆ. ಅನೇಕ ನ್ಯಾಯಾಧೀಶರು ತಲೆದಂಡ ಕೊಟ್ಟು ಸಂವಿಧಾನ ಉಳಿಸಿದ್ದಾರೆಂದು ಅವರು ತಿಳಿಸಿದರು.

ವರ್ಗಿಕೃತ ವ್ಯವಸ್ಥೆಯ ನಮ್ಮ ಸಮಾಜದಲ್ಲಿ ಸಮಾನತೆ ತುರುವ ಕಾರ್ಯವು ಅಷ್ಟು ಸುಲಭವಾದ ಕಾರ್ಯವಲ್ಲ; ಈ ಸಮಾಜದಲ್ಲಿ ಸರ್ವರೂ ಸಮಾನರಾಗಿರಬೇಕು. ಸರ್ವರೂ ಆರ್ಥಿಕವಾಗಿ ಸಬಲರಾಗಿರಬೇಕು ಎಂದು ಯೋಜಿಸಿ ಅದಕ್ಕಾಗಿಯೇ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ಬದ್ಧವಾಗಿ ಮೀಸಲು ಸೌಕರ್ಯ ಜಾರಿ ತಂದರು. ಪ್ರತಿಯೊಬ್ಬರಿಗೂ ಜೀವಿಸುವ ಹಕ್ಕು ಮತ್ತು ಸ್ವಾತಂತ್ರ್ಯದ ಹಕ್ಕು ಇರಲೇಬೇಕು ಎಂದು ಸಂವಿಧಾನದಲ್ಲಿ ಅವಕಾಶ ಕಲ್ಪಿಸಿದರು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾ ಪ್ರಧಾನ ಹಾಗೂ ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಮಾರುತಿ ಶಿ ಬಾಗಡೆ ಅವರು ಮಾತನಾಡಿ, ಈ ದೇಶದ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ಆಡಳಿತಾತ್ಮಕ ದೃಷ್ಟಿಯಿಂದ ಬಹುಮುಖ್ಯವಾಗಿರುವ ಸಂವಿಧಾನವು ನಮಗೇ ನಾವೇ ರೂಪಿಸಿಕೊಂಡಿರುವ ಸ್ವಯಂವಿಧಾನವಾಗಿದೆ. ಸಂವಿಧಾನದಲ್ಲಿರುವ ಅಧ್ಯಾಯಗಳು, ಅನುಸೂಚಿಗಳು ಮತ್ತು ಕಾಯಿದೆಗಳು ಪ್ರತಿಯೊಂದು ಅತ್ಯಂತ ಅರ್ಥಪೂರ್ಣ ಮತ್ತು ಮಹತ್ವದ್ದಾಗಿವೆ. ದಾರಿಯಲ್ಲಿ ಹೋಗುವ ಬಿಕ್ಷುಕನಿಗೂ ರಕ್ಷಣೆ ನೀಡಿರುವುದು ಪೊಲೀಸ್ ಅಲ್ಲ; ಬದಲಾಗಿ ಸಂವಿಧಾನ ಎಂಬುದನ್ನು ನಾವು ತಿಳಿಯಬೇಕು. ಪ್ರಧಾನಮಂತ್ರಿಗಳು, ಮುಖ್ಯಮಂತ್ರಿಗಳು ಆಗದಿದ್ದರೂ ಮನುಷ್ಯನಾಗಲು ಅವಕಾಶವಿದೆ ಎಂಬ ಸಂದೇಶವನ್ನು ಸಹ ನೀಡುವುದೇ ಸಂವಿಧಾನದ ವಿಶೇಷತೆಯಾಗಿದೆ. ಸಂವಿಧಾನವು ಎಲ್ಲ ಕಾನೂನುಗಳ ತಂದೆ ತಾಯಿಯಾಗಿದೆ ಎಂದು ನ್ಯಾ.ಬಾಗಡೆ ಅವರು ಪ್ರತಿಪಾದಿಸಿದರು.**(2ನೇಪುಟಕ್ಕೆ)**

## ಮಕ್ಕಳಲ್ಲಿನ ಪ್ರತಿಭೆಯನ್ನು ಹೊರತರುವಲ್ಲಿ ಪ್ರತಿಭಾ ಕಾರಂಜಿ ಸಹಕಾರಿ: ಶ್ರೀಮಾಹಾಲಿಂಗ ಮಹಾಸ್ವಾಮಿಗಳು



ಯುವಮಾರ್ಗ ಸುದ್ದಿ

**ಮಾನ್ವಿ:** ತಾಲೂಕಿನ ಕುರ್ಡಿ ಗ್ರಾಮದಲ್ಲಿನ ವಿದ್ಯಾನಿಧಿ ಪೂರ್ವ ಹಾಗೂ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಕ್ಷೇತ್ರ ಶಿಕ್ಷಣ ಇಲಾಖೆ ವತಿಯಿಂದ ನಡೆದ ಕುರ್ಡಿ ಮತ್ತು ಗೋರ್ಕಲ್ ವಲಯ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮಕ್ಕೆ ಯದ್ದಲದೊಡ್ಡಿ ಸುವರ್ಣಗಿರಿ ವಿರಕ್ತಮಠದ ಶ್ರೀ ಮಾಹಾಲಿಂಗ ಮಹಾಸ್ವಾಮಿಗಳು ಉದ್ಘಾಟಿಸಿ ಆಶಿರ್ವಾಚನ ನೀಡಿ ಮಕ್ಕಳಲ್ಲಿನ ಪ್ರತಿಭೆಯನ್ನು ಹೊರತರುವಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮಗಳು ಸಹಕಾರಿಯಾಗಿವೆ ಗುರುಗಳು ತಮ್ಮ ಶಾಲೆಯ ವಿದ್ಯಾರ್ಥಿಗಳಲ್ಲಿ ಶಿಕ್ಷಣದೊಂದಿಗೆ ಸಾಂಸ್ಕರ,ಒಳ್ಳೆಯ ಗುಣಗಳನ್ನು ಬೆಳೆಸುವ ಕಾರ್ಯವನ್ನು ಮಾಡಿದಾಗ ಮಾತ್ರ ವಿದ್ಯಾರ್ಥಿಗಳು ಮುಂದಿನ ಉತ್ತಮ ಪ್ರೇಜೆಗಳಾಗುವುದಕ್ಕೆ ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕುರ್ಡಿ ಮತ್ತು ಗೋರ್ಕಲ್ ವಲಯದ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಭಾರತನಾಟ್ಯ,ಗಾಯನ, ಜನಪದ ನೃತ್ಯ ಪ್ರದರ್ಶನ, ಛಾದ್ಮವೇಶ ಸೇರಿದಂತೆ ವಿವಿಧ ಸ್ಪರ್ಧೆಗಳಲ್ಲಿ ಉತ್ತಮ ಪ್ರದರ್ಶನ ನೀಡಿದರು,ಸ್ಪರ್ಧೆಗಳಲ್ಲಿ ವಿಜೇತರಾದ ವಿವಿಧ ಶಾಲೆಯ ಮಕ್ಕಳಿಗೆ ಬಹುಮಾನಗಳನ್ನು ಹಾಗೂ ಪ್ರಶಸ್ತಿ ಪತ್ರವನ್ನು ವಿತರಿಸಲಾಯಿತು.

ವಿದ್ಯಾನಿಧಿ ಶಿಕ್ಷಣ ಸಂಸ್ಥೆಯ ಗೌರವ ಅಧ್ಯಕ್ಷರಾದ ಜಯದೇವಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾ. ಅಧ್ಯಕ್ಷರಾದ ಸಂಗಮೇಶ ಮುಧೋಳ್, ಕುರ್ಡಿ ಮತ್ತು ಗೋರ್ಕಲ್ ವಲಯ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ವೆಂಕಟೇಶ್, ವಿದ್ಯಾನಿಧಿ ಪೂರ್ವ ಹಾಗೂ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಅಖಿಲೇಶ್, ವಿಜಯ್ ಕುಮಾರ್ , ಪ್ರಭಾಕರ್ ಶೆಟ್ಟಿ ಸೇರಿದಂತೆ ವಿವಿಧ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಕಲ್ಮಠ ಶ್ರೀಸವಿರೂಪಾಕ್ಷ ಪಂಡಿತಾರಾಧ್ಯಶಿವಾಚಾರ್ಯ ಮಹಾಸ್ವಾಮಿಗಳ ಜನ್ಮದಿನ ಅಂಗವಾಗಿ ರಕ್ತದಾನ ಶಿಬಿರ

ಯುವಮಾರ್ಗ ಸುದ್ದಿ




**ಮಾನ್ವಿ,ನ.27–** ಪಟ್ಟಣದ ಕಲ್ಮಠದ ಪೂಜ್ಯ ಶ್ರೀ ವಿರೂಪಾಕ್ಷ ಶಿವಾಚಾರ್ಯ ಆಯುರ್ವೇದಿಕ್ ಮೆಡಿಕಲ್ ಕಾಲೇಜ್ ಹಾಗೂ ಆಸ್ಪತ್ರೆಯ ಸಭಾಂಗಣದಲ್ಲಿ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯಶಿ ವಾಚಾರ್ಯ ಮಹಾಸ್ವಾಮಿಗಳ ಜನ್ಮದಿನ ಅಂಗವಾಗಿ ತಾಲೂಕು ಸಾರ್ವಜನಿಕ ಸರ್ಕಾರಿ ಆಸ್ಪತ್ರೆ, ರಿಮ್ಸ್ ರಕ್ತ ಭಂಡರಾ,ಹೆಚ್,ಡಿ.ಎಫ್.ಸಿ.ಬ್ಯಾಂಕ್ ಸಹಯೋಗದಲ್ಲಿ ನಡೆದ ಸ್ವಯಂಪ್ರೇರಿತ ರಕ್ತದಾನ ಶಿಬಿರಕ್ಕೆ ಸ್ವಯಂ ರಕ್ತದಾನ ಮಾಡುವ ಮೂಲಕ ಚಾಲನೆ ನೀಡಿ ತಾ.ಆರೋಗ್ಯಧಿಕಾರಿ ಡಾ.ಶರಣಬಸ ವರಾಜು ಮಾತನಾಡಿ, ಇದುವರೆಗೂ ಕೂಡ ರಕ್ತವನ್ನು ಕೃತಕವಾಗಿ ತಯಾರಿಸುವುದಕ್ಕೆ ವೈದ್ಯ ವಿಜ್ಞಾನ ಶಾಸ್ತ್ರದಿಂದ ಸಾಧ್ಯವಾಗಿಲ್ಲ ಅದ್ದರಿಂದ ಪ್ರತಿ ಆರೋಗ್ಯವಂತ ಮನಷ್ಯನ ದೇಹದಲ್ಲಿರುವ 5ರಿಂದ 6 ಲೀಟರ್ ರಕ್ತದಲ್ಲಿ 3ನೂರು ಎಂ.ಎಲ್. ರಕ್ತವನ್ನು ದಾನವಾಗಿ ನೀಡುವುದರಿಂದ ಆರೋಗ್ಯದ ಮೇಲೆ ಯಾವ ಪರಿಣಾಮವು ಉಂಟಾಗುವುದಿಲ್ಲ ಕೇಲವೆ ದಿನಗಳಲ್ಲಿ ರಕ್ತ ಮರು ಉತ್ಪತ್ತಿಯಾಗುತ್ತದೆ ಅದ್ದರೆ ನೀವು ದಾನವಾಗಿ ನೀಡುವ ರಕ್ತದಿಂದ ಅತ್ಯವಸರ ಪರಿಸ್ಥಿತಿಯಲ್ಲಿರುವ ರೋಗಿಗಳ ಪ್ರಾಣ ವನ್ನು ಉಳಿಸಬಹುದಾಗಿದೆ ಇಂದಿನ ದಿನಗಳಲ್ಲಿ ರಕ್ತದಿಂದ ಪ್ಲಾಸ್ಮ,ಬಿಳಿ ರಕ್ತ ಕಣಗಳನ್ನು, ಬೆರ್ಪಡಿಸಿ ಅಗತ್ಯವಿರುವವರಿಗೆ ನೀಡಿ ಜೀವ ಉಳಿಸುವುದಕ್ಕೆ ಸಾಧ್ಯವಾಗುತ್ತದೆ ಅದ್ದರಿಂದ ಪ್ರತಿ ಯೊಬ್ಬರು ಕೂಡ ಸಾಮಾಜಿಕ ಜವಬ್ದಾರಿಗೆ ಅನುಗುಣವಾಗಿ ರಕ್ತವನ್ನು ಪ್ರತಿ ಮೂರು ತಿಂಗಳಿಗೆ ಒಮ್ಮೆ ನೀಡಬಹುದಾಗಿದೆ ಎಂದು ತಿಳಿಸಿದರು.

ರಕ್ತದಾನ ಶಿಬಿರದಲ್ಲಿ ಕಾಲೇಜಿನ ವಿದ್ಯಾರ್ಥಿಗಳು,ವೈದ್ಯರು,ಸಾರ್ವಜನಿಕರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿದರು.ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಡಾ,ಜೀವನೇಶ್ವರಯ್ಯ, ಉಪಾಪ್ರಾಚಾರ್ಯರಾದ ಡಾ,ಸುಮಂಗಲ ಹೆಚ್.ಎಂ., ಉಮಶಂಕರ ಹೆಚ್. ಎಂ. ಡಾ.ಹಿರೇಮಠ ಶಿವರಾಜ ಒಡೆಯರ್, ಹೆಚ್, ಡಿ.ಎಫ್.ಸಿ.ಬ್ಯಾಂಕ್‌ನ ಮಾನ್ವಿ ಶಾಖಾ ವ್ಯವಸ್ಥಪ'ಕರಾದ ಸುದೀಪ್ ಸೌದ್ರಿ, ಕಾರ್ಯನಿರ್ವಹಕ ವ್ಯವ ಸ್ಥಾಪಕರಾದ ವೀರೇಶ, ರಿಮ್ಸ್ ರಕ್ತ ಭಂಡರಾದ ವೈದ್ಯರಾದ ಹಮ್ಮಿದ್ ಹುಸೇನ್,ಸೇರಿದಂತೆ ಕಾಲೇ ಜಿನ ವೈದ್ಯ ಉಪನ್ಯಾಸ'ಕರು ಇದ್ದರು.

## ವಾರ್ಷಿಕ ಕರಡು ಅಭಿವೃದ್ಧಿ ಅನುಮೋದನೆ ಕ್ರಿಯಾ ಯೋಜನೆ ಸಭೆ! ಕೆಲ ಅಧಿಕಾರಿಗಳು ಗೈರು

ಯುವಮಾರ್ಗ ಸುದ್ದಿ



**ಸಿಂಧನೂರು.ನ,27**–2026–27 ನೇ ಸಾಲಿನ ವಾರ್ಷಿಕ ಕರಡು ಅಭಿವೃದ್ಧಿ ಯೋಜನೆಯ ಅನುಮೋದನೆ ಹಾಗೂ ಕ್ರಿಯಾ ಯೋಜನೆಗಾಗಿ ನಗರದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ ಹಾಲ್ ಸಿದ್ದಪ್ಪ ಪೂಜಾರಿ ನೇತೃತ್ವದಲ್ಲಿ ಸಭೆ ನಡೆಸಲಾಯಿತು.

30 ಗ್ರಾ.ಪಂ.ವ್ಯಾಪ್ತಿಯಲ್ಲಿ ಸುಮಾರು 3497 ರಷ್ಟು ಕಾಮಗಾರಿಗಳಿಗೆ 330 ಕೋಟಿ ಗುರಿ ಹೊಂದಲಾಗಿದ್ದು, ಎಲ್ಲಾ ಅಧಿಕಾರಿಗಳು ಸರಿಯಾದ ಅಂಕಿ ಅಂಶಗಳನ್ನು ಕೊಡಬೇಕು, ತಪ್ಪಿದಲ್ಲಿ ಅನುದಾನ ಸಿಗುವುದು ಕಷ್ಟಕರ ನೀವು ಸರಿಯಾಗಿ ಅಂಕಿ-ಅಂಶಗಳನ್ನು ಕೊಟ್ಟಾಗ ಮಾತ್ರ ಜಿಲ್ಲಾ ಅಭಿವೃದ್ಧಿ ಯೋಜನಾ ಸಮಿತಿಯು ಸಕರಾತ್ಮಾಕವಾಗಿ ಸ್ಪಂದಿಸುತ್ತದೆ. ಇಲ್ಲದಿದ್ದರೆ ಅನುದಾನ ಸಿಗುವುದಿಲ್ಲ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಈ ವಾರ್ಷಿಕ ಕರಡು ಅಭಿವೃದ್ಧಿ ಯೋಜನಾ ಸಭೆಯಲ್ಲಿ ಕೆಲವು ಅಧಿಕಾರಿಗಳು ಗೈರು ಹಾಜರಾಗಿದ್ದನ್ನ ಕಂಡ ಅವರು, ಗೈರಾದ ಅಧಿಕಾರಿಗಳ ಮೇಲೆ ಸೂಕ್ತ ಕ್ರಮವನ್ನು ತೆಗೆದುಕೊಳ್ಳುವುದಾಗಿ ಹೇಳಿದರು.

ಈ ವೇಳೆ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್, ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ, ಸಹಾಯಕ ನಿರ್ದೇಶಕ ಅಮರಗುಂಡಪ್ಪ ಇದ್ದರು.

## ವಲಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಪ್ರತಿಭಾ ಕಾರಂಜಿ ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ಜವಳಗೇರಾ,ನ.27–** ವಲಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ 2025–26 ಕಾರ್ಯಕ್ರಮ ನಡೆಯಿತು.

ಜವಳಗೇರಾ ಕ್ಲಸ್ಟರ್ ವತಿಯಿಂದ 2025 26 ನೇ ಸಾಲಿನ ಪ್ರಾಥಮಿಕ ಶಾಲಾ ಮತ್ತು ಪ್ರೌಢಶಾಲಾ ಮಕ್ಕಳ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನುದೊಡ್ಡ ಬಸವರಾಜ್ ಪಿ ಎಲ್ ಡಿ ಬ್ಯಾಂಕ್ ಅಧ್ಯಕ್ಷರು ಉದ್ಘಾಟಿಸಿದರು. ಕಾರ್ಯಕ್ರಮದ ಮುಖ್ಯ ಅತಿಥಿ ಸ್ಥಾನವನ್ನು ಪಂಚಾಯಿತಿ ಅಧ್ಯಕ್ಷರಾದಂತ ನಾಗಲಿಂಗಪ್ಪ ವಹಿಸಿಕೊಂಡರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಬಸವಲಿಂಗಯ್ಯ ಕೆಪಿಎಸ್ ಕಾಲೇಜು ಜವಳಗೇರಾ ಇವರು ವಹಿಸಿ ಮಾತನಾಡಿ ವಿದ್ಯಾರ್ಥಿಗಳು ಇಂತಹ ಹಂತದಲ್ಲಿ ತಮ್ಮ ಹಸಜ ಪ್ರತಿಭೆಯನ್ನು ಹೊರ ಹಾಕಿ ಮುಂದಿನ ದಿನಮಾನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆ ಎಡೆಗೆ ಹೆಜ್ಜೆ ಇಡಬೇಕು ಎಂದು ಹೇಳಿದರು. ಮತ್ತು ಕಾರ್ಯಕ್ರಮದಲ್ಲಿ ಎಸ್ ಡಿಎಂಸಿ ಉಪಾಧ್ಯಕ್ಷರಾದ ರಾಮಣ್ಣ ಬೋವಿ ಭಾಗವಹಿಸಿ ಕಾರ್ಯಕ್ರಮ ಸುಗಮವಾಗಿ ನಡೆಯಲು ಎಲ್ಲಾ ಸಹಕಾರವನ್ನು ನೀಡಿದರು ಮತ್ತೋರ್ವ ಎಸ್ ಡಿ ಎಂ ಸಿ ಸದಸ್ಯರಾದ ಆರೋಗ್ಯಪ್ಪ ( ರಂಗಪ್ಪ) ಭಾಗವಹಿಸಿ ಮಾತನಾಡಿ ಪ್ರತಿಭಾ ಕಾರಂಜಿ ಕಾರ್ಯಕ್ರಮವು ಸಂಭ್ರಮ ಭರಿತವಾಗಿ ನಮ್ಮ ಊರಿನಲ್ಲಿ **(2ನೇಪುಟಕ್ಕೆ)**

## ಮೊದಲನೇಯ ಪುಟದಿಂದ

# ಸಿಎಂ-ಡಿಸಿಎಂಗೆ ಹೈಕಮಾಂಡ್‌ನಿಂದ ಕರೆ

ಸಿಎಂ, ಡಿಸಿಎಂ ಭಾಗವಹಿಸಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಕೊನೆಗೂ ಎಚ್ಚೆತ್ತುಕೊಂಡ ಹೈಕಮಾಂಡ್:ರಾಜ್ಯದಲ್ಲಿ ರಾಜಕೀಯ ಚಟುವಟಿಕೆಗಳು ಬಿರುಸು ಪಡೆದುಕೊಂಡು ಪರಿಸ್ಥಿತಿ ಕೈ ಮೀರುತ್ತಿರುವ ಹಿನ್ನೆಲೆಯಲ್ಲಿ ಕೊನೆಗೂ ಹೈಕಮಾಂಡ್ ಮಧ್ಯ ಪ್ರವೇಶಿಸುವ ನಿರ್ಧಾರ ಮಾಡಿದೆ. ಇದಕ್ಕೂ ಮೊದಲು ದೆಹಲಿಯಲ್ಲಿ ಮಲ್ಲಿಕಾರ್ಜುನ್ ಖರ್ಗೆ ಅವರು ಡಿ.ಕೆ.ಸಹೋದರರ ಜೊತೆ, ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗೆ ಪ್ರತ್ಯೇಕ ಮಾತುಕತೆ ನಡೆಸಿದ್ದರು. ಅದರ ಬಳಿಕವೂ ರಾಜಕೀಯ ಚಟುವಟಿಕೆಗಳು ತಣ್ಣಗಾಗಿಲ್ಲ.

ಕೊಟ್ಟ ಮಾತಿನಂತೆ ಸಿದ್ದರಾಮಯ್ಯ ಅಧಿಕಾರ ಬಿಟ್ಟು ಕೊಡಲೇ ಬೇಕೆಂದು ಡಿ.ಕೆ.ಶಿವಕುಮಾರ್ ಪಟ್ಟು ಹಿಡಿದಿದ್ದಾರೆ. ಈ ನಿಟ್ಟಿನಲ್ಲಿ ಹೈಕಮಾಂಡ್ ಮೇಲೆ ಒತ್ತಡ ಹೇರಲು ಡಿ.ಕೆ. ಬಣ ಶಾಸಕರು ದೆಹಲಿಯಾತ್ರೆ ನಡೆಸಿದ್ದರು. ಇತ್ತ ಬೆಂಗಳೂರಿನಲ್ಲಿ ಸಿದ್ದರಾಮಯ್ಯ ಪರವಾಗಿ, ಸಚಿವರು, ಹಿರಿಯ ನಾಯಕರು ಪ್ರತ್ಯೇಕ ಸಭೆ ನಡೆಸುತ್ತಿದ್ದಾರೆ.ಪಂಚಖಾತ್ರಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದೇವೆ ಎಂಬ ಹಮು-ಬಿಮಿನಲ್ಲಿದ್ದ ಕಾಂಗ್ರೆಸ್ ಪಕ್ಷಕ್ಕೆ ಇತ್ತಿಚಿನ ಬೆಳವಣಿಗೆಗಳು ಭಾರಿ ಹಾನಿ ಮಾಡಿವೆ. ಜನ ಅಭೂತಪೂರ್ವವಾದ ಬೆಂಬಲದೊಂದಿಗೆ ಬಹುಮತ ನೀಡಿದ್ದರೂ, ಉತ್ತಮ ಆಡಳಿತ ನೀಡುವ ಬದಲಾಗಿ, ಕುರ್ಚಿಗಾಗಿ ಕಾಂಗ್ರೆಸ್ಸಿಗರು ಕಿತ್ತಾಡುತ್ತಿದ್ದಾರೆ ಎಂಬ ಟೀಕೆಗಳು ಜೋರಾಗಿವೆ.ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಯಾವುದೇ ಹೇಳಿಕೆ ನೀಡದೆ, ಶಿಸ್ತು ಕಾಪಾಡಿಕೊಳ್ಳುವ ಪ್ರಯತ್ನ ನಡೆಸಿದ್ದರೂ, ಅವರ ಬೆಂಬಲಿಗರ ಚಟುವಟಿಕೆಗಳು ಕದನ ಕುತೂಹಲ ಹೆಚ್ಚಿಸಿವೆ.

ಕಾಂಗ್ರೆಸ್‌ನ ಬೆಳವಣಿಗೆಗಳು, ವಿರೋಧ ಪಕ್ಷಗಳ ಟೀಕೆಗೂ ಗುರಿಯಾಗಿವೆ. ಕಳೆದ 15 ದಿನಗಳಿಂದಲೂ ಇದೇ ಚರ್ಚೆಗಳು ರಾಜಕಾರಣವನ್ನು ರಾಡಿ ಮಾಡಿವೆ. ಆರಂಭದಲ್ಲೆ ತಿಳಿ ಹೇಳಿ ಸರಿ ಮಾಡುವ ಪ್ರಯತ್ನಗಳು ಯಶಸ್ವಿಯಾಗಿಲ್ಲ. ಹೀಗಾಗಿ ಹೈಕಮಾಂಡ್ ಅಂತಿಮ ಘಟ್ಟದ ಸಭೆ ನಡೆಸಲು ಮುಂದಾಗಿದೆ.

ಕರ್ನಾಟಕದ ಬದಲಾಗಿ ದೆಹಲಿಯಲ್ಲಿ ಮಾತುಕತೆಗಳು ಮತ್ತು ಸಂಧಾನ ಪ್ರಕ್ರಿಯೆಗಳು ನಡೆಯಲಿವೆ ಎಂದು ಖುದ್ದು ಖರ್ಗೆ ಅವರೇ ಸ್ಪಷ್ಟಪಡಿಸಿದ್ದಾರೆ. ಮೂರ್ನಾಲ್ಕು ದಿನಗೊಳಗಾಗಿ ನಡೆಯಬಹುದಾದ ಈ ಮಾತುಕತೆಗಳ ಬಳಿಕವಾದರೂ ಕಾಂಗ್ರೆಸ್‌ನಲ್ಲಿ ಕುರ್ಚಿ ಕಿತ್ತಾಟ ತಿಳಿಯಾಗುವ ವಾತಾವರಣ ನಿರ್ಮಾಣವಾಗಬಹುದೇ ಎಂಬ ಕುತೂಹಲ ಕಾಡುತ್ತಿದೆ.

# ಸೂರ್ಯ-ಚಂದ್ರ ಇರುವವರೆಗೂ ಭಾರತದ ಸಂವಿಧಾನ ಇರುತ್ತದೆ: ಪ್ರೊ.ಜೆ.ಎಸ್.ಪಾಟೀಲ

ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಮಾತನಾಡಿ, ಸಮಾಜದಲ್ಲಿರುವ ಪ್ರತಿಯೊಬ್ಬ ಸಾಮಾನ್ಯ ಮನುಷ್ಯನಿಗೂ ಸಂವಿಧಾನಬದ್ಧ ಹಕ್ಕು ಮತ್ತು ಬಾಧ್ಯತೆಗಳು ಲಭಿಸಲು, ಅವರಿಗೆ ನ್ಯಾಯದೊರೆತು ಸಂವಿಧಾನದ ಮೌಲ್ಯಗಳು ಕೈಗೆಟುಕುವಲ್ಲಿ ವಕೀಲರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಭಾರತ ದೇಶದ ಸ್ವಾತಂತ್ರ್ಯ ಚಳುವಳಿಯಲ್ಲಿ ಹೋರಾಟಗಾರರ ಜೊತೆಗೆ ವಕೀಲರು ಸಹ ಭಾಗಿಯಾಗಿದ್ದರು. ಈ ನಿಟ್ಟಿನಲ್ಲಿ ದೇಶದ ಸಾಮಾಜಿಕ ವ್ಯವಸ್ಥೆಯಲ್ಲಿ ಸಂವಿಧಾನದ ಮೌಲ್ಯಗಳನ್ನು ಗಟ್ಟಿಗೊಳಿಸುವಲ್ಲಿ ವಕೀಲರ ಕೊಡುಗೆ ಅಪಾರವಾಗಿದೆ ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ ಅವರು ಮಾತನಾಡಿದರು.

ಸಮಾರಂಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಗೌರವಾನ್ವಿತ ಹಿರಿಯ ಶ್ರೇಣಿಯ ದಿವಾನಿ ನ್ಯಾಯಾಧೀಶರಾದ ಹೆಚ್.ಎ.ಸಾತ್ವಿಕ್, ಜಿಲ್ಲಾ ಸರ್ಕಾರಿ ವಕೀಲರಾದ ರಾಮನಗೌಡ ಮರ್ಚೆಟ್ಹಾಳ್, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಭಾರತ ಸಂವಿಧಾನದ ಪೂರ್ವ ಪೀಠಿಕೆಯನ್ನು ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ನ್ಯಾಯವಾಧಿಗಳ ಸಂಘದ ಪದಾಧಿಕಾರಿಗಳು, ಹಿರಿಯ ಸಮಿತಿ, ಕಾರ್ಯಕಾರಿಣಿ ಸಮಿತಿಯ ಸದಸ್ಯರು ಹಾಗೂ ನ್ಯಾಯವಾದಿಗಳು ಭಾಗಿಯಾಗಿದ್ದರು. ಪತ್ರಕರ್ತರು ಮತ್ತು ವಕೀಲರಾದ ಚನ್ನಬಸವಣ್ಣ ನಿರೂಪಿಸಿದರು. ಯಲ್ಲಪ್ಪ ಪ್ರಾರ್ಥಿಸಿದರು. ನ್ಯಾಯವಾದಿಗಳ ಸಂಘದ ಖಜಾಂಚಿ ಹನುಮಂತಪ್ಪ ಮೇಟಿ ವಂದಿಸಿದರು.

# ವಲಯ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ ಪ್ರತಿಭಾ ಕಾರಂಜಿ ಕಾರ್ಯಕ್ರಮ

ಜರುಗುತ್ತಿರುವುದು ನಮ್ಮ ಹೆಮ್ಮೆ ಎಂದು ತಿಳಿಸುತ್ತಾ ವಿದ್ಯಾರ್ಥಿಗಳು ತಮ್ಮ ಪ್ರತಿಭೆಗೆ ಇಂಥ ವೇದಿಕೆಯನ್ನು ಉಪಯೋಗಿಸಿ ಇನ್ನು ಎತ್ತರಕ್ಕೆ ಮುಂದಿನ ದಿನಗಳಲ್ಲಿ ಬೆಳೆಯಬೇಕಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯವಾಗಿ ಸಾಂಸ್ಕೃತಿಕ ನೃತ್ಯ ಮತ್ತು ಕಲಾತ್ಮಕ ಪ್ರದರ್ಶನ ನಡೆದವು ಮತ್ತು ಹಾಡು ಗುಂಪು ನೃತ್ಯ ನಾಟಕ ಮತ್ತು ಪ್ರತಿಭಾ ಪ್ರದರ್ಶನಗಳು ಜರುಗಿದವು.ಕಾರ್ಯಕ್ರಮದಲ್ಲಿ ಊರಿನ ಗುರುಹಿರಿಯರು, ಕಲಾಭಿಮಾನಿಗಳು , ಶಾಲೆಯ ಹಳೆಯ ವಿದ್ಯಾರ್ಥಿ ಗಳು ಎಸ್ ಡಿ ಎಂ ಸಿ ಉಪಾಧ್ಯಕ್ಷರು ಮತ್ತು ಸದಸ್ಯರು, ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರು ಅತ್ಯಂತ ಉತ್ಸಾಹಭರಿತವಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು

### ಗಮನ ಸೆಳೆಯುತ್ತಿರುವ ಸಂವಿಧಾನ ಅರಿವು ಅಭಿಯಾನ.

# ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಟ್ರಸ್ಟ್ ದೇವದುರ್ಗದ ವಿನೂತನ ಕಾರ್ಯಕ್ರಮ

**ಯುವಮಾರ್ಗ ಸುದ್ದಿ**

**ಅರಕೇರಾ,ನ.27–** ಕಳೆದ ಐದು ವರ್ಷಗಳಿಂದ ತಮ್ಮ ಸಾಮಾಜಿಕ, ಶೈಕ್ಷಣಿಕ ಹಾಗೂ ಪರಿಸರ ಚಟುವಟಿಕೆಗಳಿಂದ ಜಿಲ್ಲಾದ್ಯಂತ ಮನೆ ಮಾತಾಗಿರುವ ಮಲದಕಲ್ ಗೆಳೆಯರ ಬಳಗ ಹಾಗೂ ಜ್ಞಾನವೃಕ್ಷ ಟ್ರಸ್ಟ್ ದೇವದುರ್ಗ ನವರು ಈಗ ಮತ್ತೊಮ್ಮೆ ವಿಭಿನ್ನ ಚಟುವಟಿಕೆಗಳಿಂದ ಸುದ್ದಿಯಲ್ಲಿದ್ದಾರೆ .

ಸರ್ಕಾರದ ಆದೇಶದಂತೆ ಕಳೆದ 11 ವರ್ಷಗಳಿಂದ ಶಾಲೆ/ ಕಾಲೇಜು/ ಕಛೇರಿ ಸೇರಿದಂತೆ ಎಲ್ಲಾ ಕಡೆ ನವೆಂಬರ್ 26 ರಂದು ಸಂವಿಧಾನದ ಪೀಠಿಕೆಯನ್ನು ಪ್ರತಿಜ್ಞಾ ವಿಧಿಯನ್ನಾಗಿ ಬೋಧಿಸಿ ಸಂವಿಧಾನ ದಿನಾಚರಣೆ ಆಚರಿಸಲಾಗುತ್ತಿರುವದು ನಮ್ಮೆಲ್ಲರಿಗೂ ಗೊತ್ತಿರುವ ಸಂಗತಿ. ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಟ್ರಸ್ಟ್ ನವರು ಸಂವಿಧಾನದ ದಿನಾಚರಣೆ 'ಯನ್ನು *ಸಂವಿಧಾನದ ಅರಿವು* ಎಂಬ ಅಭಿಯಾನದಡಿಯಲ್ಲಿ ಅರ್ಥಪೂರ್ಣವಾಗಿ ಮತ್ತು ವಿಭಿನ್ನ ಶೈಕ್ಷಣಿಕ ಚಟುವಟಿಕೆಗಳಿಂದ ಆಚರಿಸುತ್ತಿದ್ದಾರೆ.

ಹೌದು ಇವರುಗಳು ದೇವದುರ್ಗ ಮತ್ತು ಅರಕೇರಾ ತಾಲೂಕುಗಳ ವಿವಿಧ ಸರ್ಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ಪಿಯುಸಿ ಹಾಗೂ ಪದವಿ ಓದುತ್ತಿರುವ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ಅವರಿಗೆ ಸಂವಿಧಾನವನ್ನು ಅರ್ಥೈಸುವ ಮತ್ತು ಸಂವಿಧಾನದ ಮಹತ್ವ ತಿಳಿಸುವ ಕೆಲಸವನ್ನು ಕಳೆದ ಒಂದು ತಿಂಗಳಿನಿಂದ ನಿರಂತರವಾಗಿ ಮಾಡುತ್ತಿದ್ದಾರೆ.ಪದವಿ ಪೂರ್ವ ಕಾಲೇಜಿಗಳ ವಿದ್ಯಾರ್ಥಿಗಳಿಗೆ ಸಂವಿಧಾನ ಮತ್ತು ಅಂಬೇಡ್ಕರ್ ರವರ ವಿಚಾರಗಳ ಕುರಿತಾದ ವಿಷಯಗಳ ಮೇಲೆ ಪ್ರಬಂಧ ಮತ್ತು ಭಾಷಣ ಸ್ಪರ್ಧೆಯನ್ನು ಏರ್ಪಡಿಸುವ ಮೂಲಕ ವಿದ್ಯಾರ್ಥಿಗಳಿಗೆ ಸಂವಿಧಾನವನ್ನು ತಿಳಿಸುವ ಕೆಲಸವನ್ನು ಮಾಡುತ್ತಿದ್ದಾರೆ.

ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಪದವಿ ವಿದ್ಯಾರ್ಥಿಗಳಿಗಾಗಿ



ಸಂವಿಧಾನ ಮತ್ತು ಅಂಬೇಡ್ಕರ್ ಕುರಿತಾದ 100 ಪ್ರಶ್ನೆಗಳ ಮಾದರಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ಏರ್ಪಡಿಸಿ ವಿದ್ಯಾರ್ಥಿಗಳಲ್ಲಿ ಸಂವಿಧಾನದ ಅರಿವು ಮೂಡಿಸುವದರ ಜೊತೆಗೆ ಸ್ಪರ್ಧಾತ್ಮಕ ಪರೀಕ್ಷಾ ಮನೋಭಾವವನ್ನು ಹೆಚ್ಚಿಸುತ್ತಿರುವ ಕಾರ್ಯವನ್ನು ತಾಲೂಕಿನ ಪ್ರಜ್ಞಾವಂತರು ಮುಕ್ತಕಂಠದಿಂದ ಶ್ಲಾಘಿಸುತ್ತಿದ್ದಾರೆ.

ಇದರ ಜೊತೆಗೆ ರಾಯಚೂರು ಮತ್ತು ದೇವದುರ್ಗ ಗ್ರಂಥಾಲಯದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವವರಿಗೆ ಮಾದರಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ಸಹ ಇದೇ ಸಂದರ್ಭದಲ್ಲಿ ಏರ್ಪಡಿಸಿದ್ದಾರೆ..ಈ ಎಲ್ಲಾ ಸ್ಪರ್ಧೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ರೂಪದಲ್ಲಿ ಭಾರತದ ಸಂವಿಧಾನದ ಕುರಿತಾದ ಸ್ಪರ್ಧಾತ್ಮಕ ಪರೀಕ್ಷಾ ಪುಸ್ತಕಗಳನ್ನು ವಿತರಿಸಲಾಗಿದೆ..

ಯುವ ಪೀಳಿಗೆಗೆ ಸಂವಿಧಾನದ ಅರಿವು ಮೂಡಿಸುವ ಮೂಲಕ ಸಂವಿಧಾನದ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುತ್ತಿರುವ ಮಲದಕಲ್ ಗೆಳೆಯರ ಬಳಗ ಮತ್ತು ಜ್ಞಾನವೃಕ್ಷ ಟ್ರಸ್ಟ್ ಕಾರ್ಯವೈಖರಿ ನಿಜಕ್ಕೂ ಅಭಿನಂದನೀಯ ಸಂಗತಿಯಾಗಿದೆ.

# ದೇಶದ ಪ್ರತಿಯೊಬ್ಬ ಪ್ರಜೆ ಸಂವಿಧಾನವನ್ನು ಗೌರವಿಸಬೇಕು : ದುರಗಪ್ಪ ಅಮರಾವತಿ



**ಯುವಮಾರ್ಗ ಸುದ್ದಿ**

**ಮಾನ್ವಿ,ನ.27–** ಸರ್ವ ಜನಾಂಗದ ಆಶಯ ಹೊತ್ತ, ಸಮ ಸಮಾಜದ ನಿರ್ಮಾಣದ ಉದ್ದೇಶದಿಂದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ ಈ ದೇಶದ ಪ್ರತಿಯೊಬ್ಬ ನಾಗರಿಕರ ಎದೆಯ ದನಿಯಾಗಿದೆ ಎಂದು ಉಪ ನ್ಯಾಸಕ ದುರಗಪ್ಪ ಅಮರಾವತಿ ಹೇಳಿದರು

ಅವರು ಪಟ್ಟಣದ ಕಲ್ಮಠ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಸಂವಿಧಾನದ ದಿನ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಸಂವಿಧಾನದ ಆಶೋತ್ತರಗಳನ್ನು ಜನಮಾನಸಕ್ಕೆ ಮುಟ್ಟಿಸಲು,ಉತ್ತಮ ಪ್ರಜೆಗಳಾಗಿ ಬದುಕಲು, ವಿವಿಧತೆಯಲ್ಲಿ ಏಕತೆ ಕಾಣಲು,ದೇಶದ ಐಕ್ಯತೆ ಮತ್ತು ಸಮಗ್ರತೆಯನ್ನು ಕಾಪಾಡಲು ನಮಗೆ ಸಂವಿಧಾನದ ಅರಿವು ಅಗತ್ಯವಿದೆ ಈ ನಿಟ್ಟಿನಲ್ಲಿ ಜಾಗೃತಿ ಮೂಡಿಸುವುದೇ ಈ ದಿನಾಚರಣೆಯ ಉದ್ದೇಶವಾಗಿದೆ ಎಂದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಎಸ್. ಎಸ್. ಪಾಟೀಲ ಅವರು ಸಂವಿಧಾನದ ಪ್ರಸ್ತಾವನೆಯನ್ನು ವಿದ್ಯಾರ್ಥಿಗಳಿಗೆ ಬೋಧಿಸಿ ಅದರ ಮಹತ್ವವನ್ನು ವಿವರಿಸಿದರು.

ಕಲಾವಿಭಾಗದ ಮುಖ್ಯಸ್ಥ ರಮೇಶಬಾಬು ಯಾಳಗಿ, ವಿಜ್ಞಾನ ವಿಭಾಗದ ಮುಖ್ಯಸ್ಥ ಅಬ್ದುಲ್ ಬೇಗ್

ಎನ್. ಸಿ. ಸಿ ಅಧಿಕಾರಿ ವಿರುಪಣ್ಣ ಪಾಟೀಲ, ಎನ್.ಎಸ್. ಎಸ್ ಕಾರ್ಯಕ್ರಮಾಧಿಕಾರಿ ನರಸಣ್ಣ ಸುಂಕೇಶ್ವರ ವೇದಿಕೆಯಲ್ಲಿದ್ದರು.

ವಿದ್ಯಾರ್ಥಿನಿ ಮಹೇಶ್ವರಿ ಪ್ರಾರ್ಥನೆ ಗೀತೆ ಹಾಡಿದರು, ಉಪನ್ಯಾಸಕಿ ಪ್ರಿಯಾಂಕ ನಾಯಕ ಸ್ವಾಗತಿಸಿದರು, ಉಪನ್ಯಾಸಕ ಹನುಮಂತಪ್ಪ ಕಾರ್ಯಕ್ರಮ ನಿರೂಪಿಸಿದರು, ಉಪನ್ಯಾಸಕ ಸಿದ್ದಪ್ಪ ಅಮರಾವತಿ ವಂದಿಸಿದರು

# ಆಳಂದ ಬಿಜೆಪಿಯಿಂದ ವಿವಿಧ ಬೇಡಿಕೆ ಈಡೇರಿಕೆಗೆ ಪ್ರತಿಭಟನೆ




**ಆಳಂದ,ನ.27–**2025–26ನೇ ಸಾಲಿನಲ್ಲಿ ಮುಂಗಾರು ಅತೀವೃಷ್ಟಿ ಮಳೆಯಿಂದಾಗಿ ನಷ್ಟಕ್ಕೊಳಗಾದ ರೈತರು ಬೆಳೆದ ಏಕದಳ, ದ್ವಿದಳ ಹಾಗೂ ತೋಟಗಾರಿಕಾ ಬೆಳೆಗಳಿಗೆ ಎಸ್‌ಡಿಆರ್‌ಆಫ್/ ಎನ್‌ಡಿಆರ್‌ಎಫ್ ನಿಯಮಕ್ಕೆ ಅನುಸಾರವಾಗಿ ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ಕೂಡಲೇ ಪರಿಹಾರ ಬಿಡುಗಡೆಗೊಳಿಸಬೇಕೆಂದು ಬಿಜೆಪಿ ಮುಖಂಡರು ಆಗ್ರಹಪಡಿಸಿದರು.

ಗುರುವಾರ ಆಳಂದ ಪಟ್ಟಣದ ಬಸ್ ನಿಲ್ದಾಣದ ಎದುರುಗಡೆ ಆಳಂದ ಮಂಡಲ ಬಿಜೆಪಿ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ಈಗ ಬಿಡುಗಡೆ ಮಾಡಿರುವ ಪರಿಹಾರವೂ ಯಾವುದಕ್ಕೂ ಸಾಲುವುದಿಲ್ಲ. ಇದು ಕೇವಲ ರೈತರ ಕಣ್ಣೊರೆಸುವ ತಂತ್ರವಾಗಿದೆ. ಕರ್ನಾಟಕ ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳಾದ ಮೆಕ್ಕೆಜೋಳ, ಭತ್ತ, ರಾಗಿ, ತೊಗರಿ, ಈರುಳ್ಳಿ ಸೇರಿದಂತೆ ಏಕದಳ ಹಾಗೂ ದ್ವಿದಳ ಧಾನ್ಯಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ/ಪ್ರತಿ ಸಹಕಾರಿ ಸಂಘಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲು ಒತ್ತಾಯಿಸಿದರು.

ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಮಾತನಾಡಿ, 2025–26ನೇ ಸಾಲಿನ ಬೆಂಬಲ ಬೆಲೆಯಲ್ಲಿ ರೈತರು ಬೆಳೆದಿರುವ ಬೆಳೆಗಳನ್ನು ರಾಜ್ಯ ಸರ್ಕಾರ ಖರೀದಿ ಕೇಂದ್ರಗಳ ಮುಖಾಂತರ ಖರೀದಿಸಲು ಆಗ್ರಹ. ಹೈನುಗಾರಿಕೆಯಿಂದಲೇ ಜೀವನ ನಡೆಸುತ್ತಿರುವ ಕರ್ನಾಟಕ ರಾಜ್ಯದ 24ಲಕ್ಷ ಹಾಲು ಉತ್ಪಾದಕ ರೈತ ಕುಟುಂಬಗಳು ಪಶು ಆಹಾರ ಬೆಲೆ ಹೆಚ್ಚಳದಿಂದ ಸಂಕಷ್ಟಕ್ಕೊಳಗಾಗಿವೆ. ಕಾಂಗ್ರೆಸ್ ಸರ್ಕಾರವು 2023ರ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಪ್ರತಿ ಲೀಟರ್‌ಗೆ ಪ್ರೋತ್ಸಾಹ ಧನವನ್ನು ರೂ.5 ರಿಂದ 7ರೂ ಗೆ ಹೆಚ್ಚಿಸಲು ಆಗ್ರಹ ಬಾಕಿ ಉಳಿಸಿಕೊಂಡಿರುವ 620 ಕೋಟಿ ರೂಪಾಯಿ ಪ್ರೋತ್ಸಾಹ ಧನವನ್ನು ಕೂಡಲೇ ಬಿಡುಗಡೆಗೊಳಿಸುವುದು ಸೇರಿದಂತೆ ಅನೇಕ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ರಾಜ್ಯದಲ್ಲಿ ಬಿಜೆಪಿ ಸರ್ಕಾರದ (ಬಿಎಸ್‌ವೈ) ಅವಧಿಯಲ್ಲಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಗೆ ರಾಜ್ಯದ ಬೊಕ್ಕಸದಿಂದ ರೈತರಿಗೆ ನೀಡುತ್ತಿದ್ದ ವರ್ಷಕ್ಕೆ 4 ಸಾವಿರ ರೂಪಾಯಿಗಳನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ನಿಲ್ಲಿಸಿರುವುದನ್ನು ರೈತ ಸಮುದಾಯದ ಪರವಾಗಿ ಖಂಡಿಸುತ್ತೇವೆ ಹಾಗೂ ಬಿಜೆಪಿ ಸರ್ಕಾರದ ಅವಧಿಯ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಗೆ ರಾಜ್ಯ ಸರ್ಕಾರದ ಬೊಕ್ಕಸದಿಂದ ಪ್ರತಿ ವರ್ಷಕ್ಕೆ 4 ಸಾವಿರ ರೂಗಳನ್ನು ನೀಡಲು ಮತ್ತೆ ಆರಂಭಿಸಬೇಕು. ಬಿಜೆಪಿ ಸರ್ಕಾರ (ಬಿಎಸ್‌ವೈ) ಅವಧಿಯಲ್ಲಿ ರೂಪಾಯಿ 25 ಸಾವಿರ ಶುಲ್ಕಕ್ಕೆ ರೈತರಿಗೆ ನೀಡುತ್ತಿದ್ದ ವಿದ್ಯುತ್ ಟ್ರಾನ್ಸ್ ಫಾರ್ಮರ್ ಹಾಗೂ ವಿದ್ಯುತ್ ಸಂಪರ್ಕ ಯೋಜನೆಯನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ನಿಲ್ಲಿಸಿದ್ದು ಪುನಃ ಪ್ರಾರಂಭಿಸಲು ಹಾಗೂ ಕರ್ನಾಟಕ ರಾಜ್ಯದ ರೈತರಿಗೆ ರಾಜ್ಯ ಸರ್ಕಾರದ ಸಹಕಾರಿ ಬ್ಯಾಂಕ್ಗಳಿಂದ ಶೂನ್ಯ ಬಡ್ಡಿದರಲ್ಲಿ ರೂ. 10 ಲಕ್ಷದವರೆಗೆ ಸಾಲ, ಸೌಲಭ್ಯ ನೀಡಲು ಆಗ್ರಹ. ರೈತರು ಬಳಸುವ ಕೃಷಿ ಸಲಕರಣೆಗಳನ್ನು ಸಬ್ಸಿಡಿ ದರದಲ್ಲಿ ನೀಡಲು ಹೆಚ್ಚು ಹಣ ಬಿಡುಗಡೆಗೊಳಿಸಲು ಒತ್ತಾಯ ಮಾಡಿದರು.

ಸೇಡಂ ಮಾಜಿ ಶಾಸಕ ರಾಜಕುಮಾರ ಪಾಟೀಲ ತೇಲ್ಕೂರ ಮಾತನಾಡಿ, ಕಲ್ಯಾಣ ಕರ್ನಾಟಕ ಜೀವನಾಡಿಯಾದ ತುಂಗಭದ್ರಾ ಆಣೆಕಟ್ಟಿನಲ್ಲಿ 2ನೇ ಬೆಳೆಗೆ ನೀರು ಬಿಡುವಷ್ಟು ನೀರಿನ ಸಂಗ್ರಹವಿದ್ದು, ಹೆಚ್ಚು ಮಳೆಯಿಂದಾಗಿ ಒಳಹರಿವು ಕೂಡ ನಿರಂತರವಾಗಿ ಹರಿಯುತ್ತಿದ್ದರೂ ರಾಜ್ಯ ಕಾಂಗ್ರೆಸ್ ಸರ್ಕಾರ 2ನೇ ಬೆಳೆಗೆ ನೀರು ಬಿಡಲು ಸಾಧ್ಯವಿಲ್ಲವೆಂದು ತೀರ್ಮಾನಿಸಿರುತ್ತದೆ. ಕ್ರಸ್ಟ್ ಗೇಟ್‌ಗಳ ರಿಪೇರಿಗಾಗಿ ಎರಡನೇ ಬೆಳೆಗೆ ನೀರು ನಿಲ್ಲಿಸಿರುವ ಕಾಂಗ್ರೆಸ್ ಸರ್ಕಾರವು ನಷ್ಟಕ್ಕೊಳಗಾಗುವ ರೈತರಿಗೆ ಪ್ರತಿ ಎಕರೆ ಭೂಮಿಗೆ 25 ಸಾವಿರ ರೂಪಾಯಿ ಪರಿಹಾರ ನೀಡಬೇಕು. ಕರ್ನಾಟಕ ರಾಜ್ಯದ ಮಲೆನಾಡು ಹಾಗೂ ಕರಾವಳಿ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ತಲೆತಲಾಂತರದಿಂದ ಅರಣ್ಯ ಭೂಮಿ, ಗೋಮಾಳ, ಸೊಪ್ಪಿನಬೆಟ್ಟ, ದೇವರಕಾಡು ಭೂಮಿಯಲ್ಲಿ ಬಗರ್ ಹುಕುಂ ಸಾಗುವಳಿ ಮಾಡುತ್ತಿರುವ 5 ಎಕರೆ ವರೆಗಿನ ರೈತರಿಗೆ ಸರ್ಕಾರ ಅರಣ್ಯ ಇಲಾಖೆ ಕಿರುಕುಳದಿಂದ ಮುಕ್ತಗೊಳಿಸುವುದು. ರಾಜ್ಯದಲ್ಲಿ ಕಬ್ಬು ಬೆಳೆಗಾರರಿಗೆ ಕಾಂಗ್ರೆಸ್ ಸರ್ಕಾರ ನಿಗದಿ ಪಡಿಸಿರುವ ಪ್ರತಿ ಟನ್ 3300 ರೂಪಾಯಿಗಳನ್ನು ಎಲ್ಲಾ ಜಿಲ್ಲೆಗಳ ರೈತರೂ ಅನ್ವಯಿಸುವಂತೆ ಕಡ್ಡಾಯವಾಗಿ ನೀಡಲು ಒತಾಯಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಅಶೋಕ ಬಗಲಿ ಮಾತನಾಡಿ, ಕೃಷ್ಣಾ ಮೇಲ್ದಂಡೆ ಯೋಜನೆ, ಮಹಾದಾಯಿ ಯೋಜನೆ, ಕಳಸಾ ಬಂಡೂರಿ, ಅಪ್ಪಭದ್ರಾ ಮೇಲ್ದಂಡೆ ಯೋಜನೆ, ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ಮುತ್ತು ಕಾಲುವೆ, ಟನಲ್‌ಗಳು ಹಾಗೂ ಅಶ್ವೇಡೆಟ್‌ಗಳ ರಿಪೇರಿ, ಮೇಕೆದಾಟು ಹಾಗೂ ಎತ್ತಿನಹೊಳೆ ಯೋಜನೆಗಳನ್ನು ತ್ವರಿತಗತಿಯಲ್ಲಿ ಅನುಷ್ಠಾನಗೊಳಿಸಲು ಕಾಂಗ್ರೆಸ್ ಸರ್ಕಾರ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ಪ್ರತಿವರ್ಷ 30 ಸಾವಿರ ಕೋಟಿ ಹಣ ಬಿಡುಗಡೆಗೊಳಿಸಿ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆಗ್ರಹ ಕರ್ನಾಟಕ ರಾಜ್ಯದಲ್ಲಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದಾಗಿನಿಂದ ಈ ನಾಡಿನ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಪರಿಹಾರ ನೀಡುತ್ತಿಲ್ಲ. ಬರದ ಸಂದರ್ಭದಲ್ಲಿ ರಾಜ್ಯ ಸರಕಾರ ಎಚ್ಚೆತ್ತುಕೊಂಡಿಲ್ಲ; ಅತಿವೃಷ್ಟಿ ಸಂದರ್ಭದಲ್ಲೂ ತಲೆ ಕೆಡಿಸಿಕೊಂಡಿಲ್ಲ. ಕಬ್ಬು ಬೆಳೆಗಾರರು ನಿರಂತರ ಹೋರಾಟ ಮಾಡಿದರೂ ಸ್ಪಂದಿಸಿಲ್ಲ. ಈಗ ಮೆಕ್ಕೆಜೋಳ ಬೆಳೆಯುವ ರೈತರೂ ಸಂಕಷ್ಟದಲ್ಲಿದ್ದಾರೆ. ರಾಜ್ಯ ಸರಕಾರ ಇನ್ನೂ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಿಲ್ಲ. ಬೆಳೆಹಾನಿಗೆ ಪರಿಹಾರ ಘೋಷಿಸಿ ಒಂದೂವರೆ ತಿಂಗಳಾದರೂ ಪರಿಹಾರ ಕೊಡುವಲ್ಲಿ ರಾಜ್ಯ ಸರಕಾರ ತಲೆ. ಕೆಡಿಸಿಕೊಂಡಿಲ್ಲ. ವೈರಲ್ ಇನ್‌ಫೆಕ್ಷನ್ ಆಗಿ ಭತ್ತದ ಬೆಳೆ ಹಾನಿಗೊಳಗಾಗಿದೆ. ರಾಜ್ಯ ಸರಕಾರ ರೈತರ ಹಿತ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದೆ. ರಾಜ್ಯದ ಎಲ್ಲ ಸಮಸ್ಯೆಗೂ ಕೇಂದ್ರ ಸರಕಾರದ ಕಡೆ ಬೆಟ್ಟು ತೋರಿಸುವುದು ಮತ್ತು ಪರಿಹಾರಕ್ಕಾಗಿ ಅವರಕಡೆ ಮುಖ ನೋಡುವುದಷ್ಟೇ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಸೀಮಿತವಾಗಿದೆ ಎಂದು ಆರೋಪಿಸಿದರು. ಪ್ರತಿಭಟನೆ ನಂತರ ತಹಸೀಲದಾರ ಮೂಲಕ ರಾಜ್ಯಪಾಲರಿಗೆ ಬರೆದ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ, ವೀರಣ್ಣಾ ಮಂಗಾಣೆ, ಅಣ್ಣಾರಾವ ಪಾಟೀಲ ಕವಲಗಾ, ಸಂತೋಷ ಹಾದಿಮನಿ, ಲಿಂಗರಾಜ ಬಿರಾದಾರ, ಬಸವರಾಜ ಬಿರಾದಾರ, ಚಂದ್ರಕಾಂತ ಭೂಸನೂರ, ಮಲ್ಲಿಕಾರ್ಜುನ ತಡಕಲ, ಪಂಡಿತರಾವ ಪಾಟೀಲ, ಆದಿನಾಥ ಹೀರಾ, ನಾಗರಾಜ ಶೇಗಜಿ, ಫಯ್ಯಾಜ್ ಪಟೇಲ, ಶರಣು ಸರಸಂಬಿ, ಸಂದೀಪ ನಾಯಕ ಇದ್ದರು.

ಯುವ ಮಾರ್ಗ

ಶುಕ್ರವಾರ: 28–10–2025

# ಇಂದು ಉಡುಪಿಗೆ ಮೋದಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ

**ಉಡುಪಿ, ನ.27–**ಪ್ರಧಾನಿ ಮೋದಿ ಅವರು ಇಂದು ನವೆಂಬರ್ 28 ರಂದು ರಾಜ್ಯಕ್ಕೆ ಆಗಮಿಸಲಿದ್ದು ಐತಿಹಾಸಿಕ ಉಡುಪಿ ಶ್ರೀ ಕೃಷ್ಣಮಠಕ್ಕೆ ಪ್ರಧಾನಿ ಮೋದಿ ಅವರು ಭೇಟಿ ನೀಡಲಿದ್ದಾರೆ, ಶ್ರೀ ಕೃಷ್ಣನ ದರ್ಶನವನ್ನು ಕನಕ ಕಿಂಡಿಯಿಂದ ಪಡೆಯಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಲಕ್ಷ ಕಂಠ ಭಗವದ್ಗೀತೆ ಪಠಣ ಕಾರ್ಯಕ್ರಮಕ್ಕಾಗಿ ಉಡುಪಿ ಶ್ರೀ ಕೃಷ್ಣ ಮಠಕ್ಕೆ ಆಗಮಿಸುತ್ತಿದ್ದಾರೆ. ವಿಶೇಷ ವಿಮಾನದ ಮೂಲಕ ಮಂಗಳೂರಿಗೆ ಬಂದ ನಂತರ, ಪ್ರಧಾನಿ ಮೋದಿ ಸೇನಾ ಹೆಲಿಕಾಪ್ಟರ್ ಮೂಲಕ ಉಡುಪಿಗೆ ಪ್ರಯಾಣಿಸಲಿದ್ದಾರೆ.

ಮೂರು ಹೆಲಿಕಾಪ್ಟರ್‌ಗಳು ಏಕಕಾಲದಲ್ಲಿ ಆಗಮಿಸುವ ಹಿನ್ನೆಲೆಯಲ್ಲಿ, ಆದಿ ಉಡುಪಿಯಲ್ಲಿ 60 ಲಕ್ಷ ರೂ. ವೆಚ್ಚದಲ್ಲಿ ಹೊಸ ಹೆಲಿಪ್ಯಾಡ್ ನಿರ್ಮಿಸಲಾಗಿದೆ. ಸಂಕೀರ್ಣದ ಒಳಗೆ ಮತ್ತು ಹೊರಗೆ ವಿಶಾಲವಾದ ರಸ್ತೆಯನ್ನು ನಿರ್ಮಿಸಲಾಗಿದೆ. ಶುಕ್ರವಾರ ರಥ ಬೀದಿಯಿಂದ ಉಡುಪಿ ಕೃಷ್ಣ ಮಠಕ್ಕೆ ಆಗಮಿಸುವ ಪ್ರಧಾನಿ ಮೋದಿ, ಮೊದಲು ಕನಕನ ಕಿಂಡಿಗೆ ಭೇಟಿ ನೀಡಿ ಕೃಷ್ಣನಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ.

ಅವರು ಸುವರ್ಣ ಕನಕನ ಕಿಂಡಿಯನ್ನು ಉದ್ಘಾಟಿಸಲಿದ್ದಾರೆ ಮತ್ತು ಕನಕದಾಸರ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ಮಠವನ್ನು ಪ್ರವೇಶಿಸಿದ ನಂತರ, ಅವರು ಮಾಧವ ಸರೋವರದಲ್ಲಿ ತೀರ್ಥ ಪ್ರೋಕ್ಷಣೆಯನ್ನು ಮಾಡಿ ಶ್ರೀ ಕೃಷ್ಣನಿಗೆ ಪ್ರಾರ್ಥನೆ ಸಲ್ಲಿಸಲಿದ್ದಾರೆ. ಅವರು ಸುವರ್ಣ ತೀರ್ಥ ಮಂಟಪವನ್ನು ಉದ್ಘಾಟಿಸಲಿದ್ದಾರೆ, ಅಷ್ಟಮಠದ ಮುಖ್ಯಸ್ಥರನ್ನು ಭೇಟಿ ಮಾಡಿ ಪ್ರಸಾದ ಸ್ವೀಕರಿಸಲಿದ್ದಾರೆ. ಅವರು ಗೀತಾ ಮಂದಿರಕ್ಕೂ ಭೇಟಿ ನೀಡಲಿದ್ದಾರೆ.



# ಡಿಕೆಶಿಗೆ ಸಿಎಂ ಸ್ಥಾನ ನೀಡುವಂತೆ ಒಕ್ಕಲಿಗರ ಒಗ್ಗಟ್ಟು ಪ್ರದರ್ಶನ

**ಬೆಂಗಳೂರು,ನ.27–** ಕೆಪಿಸಿಸಿ ಅಧ್ಯಕ್ಷರಾಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಮುಖ್ಯಮಂತ್ರಿಯಾಗಲು ಕಾಂಗ್ರೆಸ್ ಹೈಕಮಾಂಡ್ ಅವಕಾಶ ಮಾಡಿಕೊಡಬೇಕು ಎಂದು ರಾಜ್ಯ ಒಕ್ಕಲಿಗರ ಸಂಘ ಆಗ್ರಹಿಸಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಎಲ್. ಶ್ರೀನಿವಾಸ್ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಶಿವಕುಮಾರ್ ಅವರು ಹಗಲಿರುಳು ಶ್ರಮಿಸಿದ್ದಾರೆ. ಅದನ್ನು ಪರಿಗಣಿಸಬೇಕು. ಪಕ್ಷಕ್ಕಾಗಿ ಅವರು ಮಾಡಿರುವ ಕೆಲಸಕ್ಕೆ ಕೂಲಿ ಕೊಡಬೇಕು ಎಂದು ಅವರು ಒತ್ತಾಯಿಸಿದರು. ಪಕ್ಷದ ನಿಷ್ಠಾವಂತರು, ಕಟ್ಟಾಳು ಶಿವಕುಮಾರ್ ಅವರಿಗೆ ಯಾವುದೇ ಕಾರಣಕ್ಕೂ ಅನ್ಯಾಯ ವಾಗಬಾರದು.

ಒಂದು ವೇಳೆ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಸಿಗದಿದ್ದರೆ, ನಮ ಸಮುದಾಯದ ಸ್ವಾಮೀಜಿಗಳ ಮಾರ್ಗದರ್ಶನದಲ್ಲಿ ಹೋರಾಟ ಮಾಡುತ್ತೇವೆ ಎಂದರು.

ನಮ ಸಮುದಾಯದಲ್ಲಿ ಸದ್ಯಕ್ಕೆ ಮುಖ್ಯಮಂತ್ರಿ ಪ್ರಬಲ ಆಕಾಂಕ್ಷಿಯಾಗಿ ಶಿವಕುಮಾರ್ ಮುಂಚೂಣಿಯಲ್ಲಿದ್ದಾರೆ. ಬೇರೆಯವರ ಪ್ರಸ್ತಾಪ ಬಂದಾಗ ಅದರ ಬಗ್ಗೆ ಪ್ರತಿಕ್ರಿಯಿಸುತ್ತೇವೆ ಎಂದರು.

ಶಿವಕುಮಾರ್ ಅವರು ವಿಧಾನಸಭೆ ಚುನಾವಣೆ ಸಂದರ್ಭದಲ್ಲಿ ಕೇಳಿದಂತೆ ನಾಡಿನ ಜನರು ಅವರಿಗೆ ಪೆನ್ನು ಪೇಪರ್ ಕೊಟ್ಟಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆ ಐದು ವರ್ಷ ಮುಖ್ಯಮಂತ್ರಿ ಆಗಿದ್ದರು. ಈಗ ಎರಡೂವರೆ ವರ್ಷ ಮುಖ್ಯಮಂತ್ರಿಯಾಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಕೊಡುತ್ತಾರೋ ಇಲ್ಲವೋ ಎಂಬ ಅನುಮಾನ ಶುರುವಾಗಿದೆ. ಹಾಗಾಗಿ ಈ ಆಗ್ರಹ ಮಾಡುತ್ತಿದ್ದೇವೆ ಎಂದರು.

ಒಕ್ಕಲಿಗರ ಸಂಘದ ಎಲ್ಲಾ ನಿರ್ದೇಶಕರು, ಪದಾಧಿಕಾರಿಗಳು ಒಟ್ಟಾಗಿದ್ದು, ಉಳಿದಿರುವ ಇನ್ನೊಂದು ವರ್ಷದಲ್ಲಿ ಸಂಘದ ಅಭಿವೃದ್ಧಿಗಾಗಿ ಶ್ರಮಿಸುತ್ತೇವೆ ಎಂದು ಅವರು ಹೇಳಿದರು.

ಸಂಘದ ಮಾಜಿ ಅಧ್ಯಕ್ಷ ಬಿ.ಕೆಂಚಪ್ಪಗೌಡರು ಮಾತನಾಡಿ, ಡಿ.ಕೆ. ಶಿವಕುಮಾರ್ ಅವರು ಚುನಾವಣೆಗೂ ಮುನ್ನ ಪೆನ್ನು ಪೇಪರ್ ಕೊಡಿ ಎಂದು ಕೇಳಿದ್ದರು. ಅದರಂತೆ ನಮ ಸಮುದಾಯ ಮೊದಲ ಸ್ಥಾನದಲ್ಲಿ ನಿಂತು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿತ್ತು. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಶಿವಕುಮಾರ್ ಅವರ ಶ್ರಮ ಸಾಕಷ್ಟಿದೆ ಎಂದರು.



ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾಗಿದ್ದವರು ಮುಖ್ಯಮಂತ್ರಿ ಆಗುವ ಪರಿಪಾಠವೂ ಇದೆ. ಸಿದ್ದರಾಮಯ್ಯ ಅವರು ಕಾಂಗ್ರೆಸ್ ಪಕ್ಷದ ನಾಯಕರಾಗಿ, ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. ಅವರು ಮುಖ್ಯಮಂತ್ರಿ ಆಗಿದ್ದು ನಮಗೂ ಸಂತೋಷ. ಆದರೆ ಡಿಕೆ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿಯಾಗುವ ಅವಕಾಶ ತಪ್ಪಬಾರದು ಎಂದರು.

ಕಷ್ಟಪಟ್ಟು ಅವರು ಪಕ್ಷವನ್ನು ಅಧಿಕಾರಕ್ಕೆ ತಂದಿದ್ದಾರೆ. ಮುಂದೆ ಅಧಿಕಾರಕ್ಕೆ ಕಾಂಗ್ರೆಸ್ ಪಕ್ಷ ಬರಬೇಕಾದರೆ ಶಿವಕುಮಾರ್ ಅವರಿಗೆ ಅವಕಾಶ ಮಾಡಿಕೊಡಬೇಕು. ಒಂದು ವೇಳೆ ವಂಚನೆಯಾದರೆ ಮುಂದಿನ ಚುನಾವಣೆಯಲ್ಲಿ ಪಾಠ ಕಲಿಸುತ್ತೇವೆ ಹಾಗೂ ನ್ಯಾಯಕ್ಕಾಗಿ ಹೋರಾಟವನ್ನು ಮಾಡುತ್ತೇವೆ ಎಂದರು.

**ಪ್ರಥಮ ಭಾರಿಗೆ ಅವಿರೋಧ ಆಯ್ಕೆ:**ಒಕ್ಕಲಿಗರ ಸಂಘದ ಇತಿಹಾಸದಲ್ಲಿ ಮೊದಲ ಬಾರಿಗೆ ಪದಾಧಿಕಾರಿಗಳ ಆಯ್ಕೆ ಅವಿರೋಧವಾಗಿ ನಡೆದಿದೆ. ಸಂಘದ ಅಭಿವೃದ್ಧಿಗೆ ಎಲ್ಲಾ 35 ನಿರ್ದೇಶಕರು ಒಗ್ಗಟ್ಟಿನಿಂದ ಶ್ರಮಿಸುತ್ತೆ?ವೆ. ಸರ್ವ ಸದಸ್ಯರ ಸಭೆ ನಡೆಸುವುದು, ಬೈಲಾ ತಿದ್ದುಪಡಿ ಮಾಡುವುದು, ಎಲ್ಲಾ ಜಿಲ್ಲೆಗಳಲ್ಲಿ ಹೆಣ್ಣು ಮಕ್ಕಳ ವಸತಿ ನಿಲಯ ಸ್ಥಾಪಿಸಲು ಕ್ರಮ ಕೈಗೊಳ್ಳುತ್ತಿದ್ದೇವೆ. ಕೃಷಿ ಕಾಲೇಜು, ಮತ್ತೊಂದು ಎಂಜಿನಿಯರಿಂಗ್ ಮತ್ತು ಮೆಡಿಕಲ್ ಕಾಲೇಜು ಪ್ರಾರಂಭಿಸಲು ಮುಂದಾಗುತ್ತಿದ್ದೇವೆ ಎಂದು ಅವರು ಇದೇ ವೇಳೆ ಹೇಳಿದರು.

ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಜಿ. ಗಂಗಾಧರ್ ಮಾತನಾಡಿ, ಕಾಂಗ್ರೆಸ್ ಪಕ್ಷದ ಅಧಿನಾಯಕಿ ಸೋನಿಯಾ ಗಾಂಧಿ ಅವರು ಹಾಗೂ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಶಿವಕುಮಾರ್ ಅವರ ಸೇವಾ ಹಿರಿತನ ಪರಿಗಣಿಸಿ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಮನವಿ ಮಾಡಿದರು.

ಸಂಘದ ಮಾಜಿ ಪ್ರಧಾನ ಕಾರ್ಯದರ್ಶಿ ಟಿ. ಕೋನಪ್ಪ ರೆಡ್ಡಿ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷದ ಕಟ್ಟಾಳು, ಶಿಸ್ತಿನ ಸಿಪಾಯಿ ಆಗಿರುವ ಶಿವಕುಮಾರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು. ಹಳೆ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಹೆಚ್ಚು ಸ್ಥಾನಗಳಿಸಲು ಒಕ್ಕಲಿಗ ಸಮುದಾಯವು ಕಾರಣ. ಇಡೀ ಸಮುದಾಯ ಶಿವಕುಮಾರ್ ಅವರ ಬೆಂಬಲಕ್ಕೆ ಇದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುವ ಸಿದ್ಧಾಂತವುಳ್ಳ ಪಕ್ಷ. ಹಾಗಾಗಿ ಮಾತಿಗೆ ತಪ್ಪುವುದಿಲ್ಲ ಎಂಬ ವಿಶ್ವಾಸವಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷರಾದ ಡಾ. ರೇಣುಕಾ ಪ್ರಸಾದ್, ಎಂ ಪುಟ್ಟಸ್ವಾಮಿ, ಸಹಾಯಕ ಕಾರ್ಯದರ್ಶಿ ಡಾ.ಡಿ. ಕೆ.ರಮೇಶ್, ಖಜಾಂಚಿ ಕೆ.ವಿ.ಶ್ರೀಧರ್, ಸಂಘದ ನಿರ್ದೇಶಕರಾದ ವೆಂಕಟರಾಮೇಗೌಡ, ಹನುಮಂತರಾಯಪ್ಪ, ಬಿ.ಪಿ.ಮಂಜೇಗೌಡ, ಜೆ ರಾಜು, ಲೋಕೇಶ್, ಅಶೋಕ್ ಜಯರಾಮ್, ಎಲುವಳ್ಳಿ ರಮೇಶ್, ಡಾ ನಾರಾಯಣಸ್ವಾಮಿ, ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷ ನಾಗರಾಜ್ ಪ್ರಧಾನ ಸಂಚಾಲಕ ಆಡಿಟರ್ ನಾಗರಾಜ್ ಮತ್ತಿತರರು ಉಪಸ್ಥಿತರಿದ್ದರು.

# ಸದ್ಯ ಸಿಎಂ ಬದಲಾವಣೆ ಬೇಡ: ಅನೀಲ ಬೆಲ್ದಾರ್

**ಬೀದರ: ನ.27–**ಜನಸಂಖ್ಯೆಗೆ ಅನುಗುಣವಾಗಿ ಶೋಷಿತರಿಗೆ, ಹಿಂದುಳಿದವರಿಗೆ ಮತ್ತು ದಲಿತರಿಗೆ ಮೀಸಲಾತಿ ಸಿಗಬೇಕೆಂದು ಸಮೀಕ್ಷೆ ಮಾಡಿಸಲಾಗಿತ್ತು. ಸದ್ಯ ಸಿಎಂ ಸಿದ್ಧರಾಮಯ್ಯ ಅವರನ್ನು ಕೆಳಗಿಳಿಸಿ ಕಾಂತರಾಜು ವರದಿ ಮೂಲೆಗುಂಪು ಮಾಡುವ ಪ್ರಯತ್ನ ಪಟ್ಟಭದ್ರ ಹಿತಾಸಕ್ತಿಗಳಿಂದ ನಡೆಯುತ್ತಿದೆ. ಇದಕ್ಕೆಲ್ಲ ಡಿಕೆ ಶಿವಕುಮಾರ ಅವರೇ ಕಾರಣ ಎಂದು ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಬಸವರಾಜ ಮಾಳಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ, ಶೋಷಿತ ಸಮುದಾಯಗಳ ಒಕ್ಕೂಟದ ವತಿಯಿಂದ ಮಂಗಳವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಡಿಕೆ ಶಿವಕುಮಾರ ಮುಖ್ಯಮಂತ್ರಿ ಆದರೆ ಕಾಂತರಾಜು ವರದಿ ಜಾರಿಯಾಗುತ್ತೆ ಎನ್ನುವ ವಿಶ್ವಾಸ ನಮಗಿಲ್ಲ. ಶೋಷಿತರಿಗೆ, ದಲಿತರಿಗೆ, ಹಿಂದುಳಿದವರಿಗೆ ಮೇಲೆತ್ತುವ ಕಾರ್ಯ ಮಾಡುತ್ತಾರೆ ಎನ್ನುವ ಭರವಸೆಯಿಂದಲೇ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ದಲಿತರು ಒಂದು ಕಡೆ ಮತ ಹಾಕಿದ್ದಾರೆ.

16 ಬಾರಿ ಬಜೇಟ್ ಮಂಡನೆ ಮಾಡಿ, ಆರ್ಥಿಕ ಶಿಸ್ತು ಕಾಪಾಡಿಕೊಂಡು ಬಂದ ಸಿದ್ಧರಾಮಯ್ಯ ಅವರು ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎನ್ನುವ ಸೂತ್ರ ಅಳವಡಿಸಿಕೊಂಡಿದ್ದಾರೆ. ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿದರೆ ರಾಜ್ಯದ ತುಂಬಾ ದಂಗೆಗಳಾಗುತ್ತವೆ. ಪ್ರತಿಭಟನೆಗಳು ನಡೆಯುತ್ತವೆ ಎಂದರು.



ಸಂವಿಧಾನ ಸಂರಕ್ಷಣಾ ಸಮಿತಿಯ ರಾಜ್ಯ ಮಹಾಪ್ರಧಾನ ಕಾರ್ಯದರ್ಶಿ ಅನೀಲಕುಮಾರ ಬೆಲ್ದಾರ್ ಮಾತನಾಡಿ ಇಂದು ರಾಜ್ಯದಲ್ಲಿ ಮನುವಾದಿಗಳ ಮತ್ತು ಸಂವಿಧಾನದ ಮಧ್ಯೆ ಸಂಘರ್ಷ ನಡೆಯುತ್ತಿದೆ. ಐದು ವರ್ಷ ಸಿದ್ಧರಾಮಯ್ಯನವರೇ ಸಿಎಂ ಎಂದು, ಅವರ ನೇತೃತ್ವವನ್ನು ಒಪ್ಪಿ ಜನ ಮತ ಹಾಕಿದ್ದಾರೆ. ಈಗ ಷಡ್ಯಂತ್ರದಿಂದ ಅವರನ್ನು ಕೆಳಗಿಳಿಸಿ ಅರಾಜಕತೆ, ಅಶಾಂತಿ ಮೂಡಿಸುವ ಹುನ್ನಾರ ನಡೆಯುತ್ತಿದೆ. ಒಂದು ವೇಳೆ ಸಿಎಂ ಬದಲಾವಣೆಯಾದರೆ ನಂತರ ದಲಿತ ನಾಯಕರಿಗೆ ಮುಖ್ಯಮಂತ್ರಿ ಸ್ಥಾನ ನೀಡಿ ಕಾಂಗ್ರೆಸ್ ಹೈಕಮಾಂಡ ಸದ್ಯ ನಡೆಯುತ್ತಿರುವ ಗೊಂದಲಕ್ಕೆ ತೆರೆ ಎಳೆಯಬೇಕೆಂದರು.

ದಲಿತ ಸಂಘರ್ಷ ಸಮಿತಿಯ ಮುಖಂಡರಾದ ರಮೇಶ ಡಾಕುಳಗಿ ಮಾತನಾಡಿ 2028ರಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಬೇಕೆಂದರೆ ಸಿದ್ಧರಾಮಯ್ಯ ಅವರನ್ನೇ ಸಿಎಂ ಸ್ಥಾನದಲ್ಲಿ ಮುಂದುವರೆಸಬೇಕು. ಇಲ್ಲದಿದ್ದರೆ ಬಿಹಾರದಲ್ಲಿ ಕಾಂಗ್ರೆಸ್ ಸೋಲುಂಡಂತೆ ರಾಜ್ಯದಲ್ಲಿಯೂ ಅದೇ ಸ್ಥಿತಿ ಬರುತ್ತದೆ ಎಂದರು.

ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಅಧ್ಯಕ್ಷ ಡಾ. ರಾಜಶೇಖರ ಸೇಡಂಕರ್ ಮಾತನಾಡಿ ಓಬಿಸಿ ನಾಯಕ ಸಿದ್ಧರಾಮಯ್ಯ ಅವರನ್ನು ಕೆಳಗಿಳಿಸಿದರೆ ಹೋರಾಟ ಮಾಡಲಾಗುವುದು ಎಂದರು.

ಇದೇ ವೇಳೆ ವೇದಿಕೆ ಮೇಲೆ ಉಭಯ ಒಕ್ಕೂಟದ ಮುಖಂಡರಾದ ತಾನಾಜಿ ಸಗರ, ತುಕಾರಾಮ ಚಿಮಕೊಡೆ, ಸುಭಾಷ ಹಮಿಲಪುರೆ, ಶೈಲೇಂದ್ರ ಹಿಬಾರೆ, ಶಾಂತಕುಮಾರ, ರಾಜಕುಮಾರ, ಪುಂಡಲಿಕರಾವ, ಪ್ರದೀಪ ನಾಟೆಕಾರ್ ಸೇರಿದಂತೆ ಹಲವರಿದ್ದರು.

## ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸ್ಮರಣಾರ್ಥ ಪುರಸ್ಕಾರ ನೀಡುತ್ತಿರುವ ವಚನ ಟಿ. ವಿ.



**ಕಲಬುರಗಿ:ನ.27–** ವಚನ ಟಿ. ವಿ.ಯ ಪರಿಶ್ರಮಕ್ಕೆ ಮೂರು ದಶಕಗಳ ಅನುಭವವಿದ್ದು ಈಗ ಒಂದು ವರ್ಷ ಪೂರೈಸಿದೆ. ತದ ನಿಮಿತ್ಯ ಸಪ್ತಸಾಧಕರ ರಾಷ್ಟ್ರೀಯ ಪುರಸ್ಕಾರಗಳನ್ನು ನೀಡುತ್ತಿರುವುದು ಅಭಿನಂದನಿಯ. ದುಬೈನಲ್ಲಿ 29ನೇ ನವೆಂಬನಂದು ವಚನ ಟಿ.ವಿ. ರಾಷ್ಟ್ರೀಯ ಪುರಸ್ಕಾರ ಸಮಾರಂಭ ಜರುಗಲಿದ್ದು, ಕಾಯಕ ದಾಸೋಹ ಹಾಗೂ ಅನುಭಾವ ತತ್ವಗಳನ್ನು ಪ್ರಚಾರ ಮಾಡಿದ ಒಟ್ಟು ಏಳು ಮಹನೀಯರ ಹೆಸರಿನಲ್ಲಿ ರಾಷ್ಟ್ರೀಯ ಪುರಸ್ಕಾರ ನೀಡುವ ನಿರ್ಣಯದಲ್ಲಿ ಕಲಬುರಗಿಯ ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸ್ಮರಣಾರ್ಥ ಪುರಸ್ಕಾರ ಪ್ರಶಸ್ತಿ ಕೊಡುತ್ತಿರುವುದು ಇಡೀ ಕಲ್ಯಾಣ ಕರ್ನಾಟಕಕ್ಕೆ ಹೆಮ್ಮೆಯ ವಿಷಯವಾಗಿದೆ.

ಪೂಜ್ಯ ಡಾ. ಅಪ್ಪಾಜಿಯವರು ಅನ್ನದಾಸೋಹ ಶಿಕ್ಷಣ ದಾಸೋಹ, ತ್ರಿಕಾಲ ಪೂಜೆ ಮಾಡುತ್ತಾ ಶಿಕ್ಷಣಕ್ಕೆ ಒತ್ತುಕೊಟ್ಟು ಇಂದು ವಿಶ್ವವಿದ್ಯಾಲಯದ ಮಟ್ಟಿಗೆ ಬೆಳೆಸಿದ ಕೀರ್ತಿ ಅವರದ್ದಾಗಿದೆ. ಕಾಯಕ, ದಾಸೋಹ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯದ ಅವರ ಕೆಲಸವು ಅಸಂಖ್ಯಾತ ಜನರ ಜೀವನದ ಮೇಲೆ ಆಳವಾದ ಮತ್ತು ಶಾಶ್ವತವಾದ ಪರಿಣಾಮವನ್ನು ಬೀರಿದೆ. ಅಪ್ಪಾಜಿಯವರ ಸೇವೆ, ಸಾಮಾಜಿಕ ಸುಧಾರಣೆಯ ತತ್ವಗಳನ್ನು ಒಳಗೊಂಡಿರುವ ಅವರ ಜೀವಿತಾವಧಿಯ ಕೆಲಸವು ಇಂದು ಅನೇಕರಿಗೆ ಸ್ಫೂರ್ತಿಯಾಗಿದೆ. ಡಾ.ಅಪ್ಪಾಜಿಯವರ ಜೀವನ, ಸಾಮಾಜಿಕ ಕಲ್ಯಾಣದ ಬಗ್ಗೆ ಅವರಿಗಿದ್ದ ಆಳವಾದ ಬದ್ಧತೆ ಹೇಗೆ ಅರ್ಥಪೂರ್ಣ ಬದಲಾವಣೆಗೆ ಕಾರಣವಾಗಬಹುದು ಎಂಬುದಕ್ಕೆ ಪ್ರಬಲ ಉದಾಹರಣೆಯಾಗಿದೆ.

ಇದೆಲ್ಲವೂ ಮನಗಂಡು ವಚನ ಟಿ. ವಿ. ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸ್ಮರಣಾರ್ಥ ಸಾಧನೆಗೈದ ಮಹನೀಯರಿಗೆ ಪುರಸ್ಕಾರ ಪ್ರಶಸ್ತಿ ನೀಡುತ್ತಿರುವುದು ಶ್ಲಾಘನೀಯವೆಂದು, ಶರಣಬಸವೇಶ್ವರ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ, ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ವಚನ ಟಿ.ವಿ.ಯು ಕೈಗೊಂಡ ಈ ನಿರ್ಣಯಕ್ಕೆ ಸಂತಸ ವ್ಯಕ್ತಪಡಿಸಿ, ಶುಭವಾಗಲೆಂದು ಹಾರೈಸಿದ್ದಾರೆ. ಹಾಗೆಯೇ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಹರ್ಷವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

# ಡಿ.21 ರಂದು ಪಲ್ಸ್ ಪೋಲಿಯೋ ಲಸಿಕಾ



**ಬಳ್ಳಾರಿ,ನ.27–** ದೇಶದಲ್ಲಿ ಪೋಲಿಯೋ ರೋಗವು ಮರುಕಳಿಸಬಾರದು ಎಂಬ ಮುನ್ನೆಚ್ಚರಿಕೆಯೊಂದಿಗೆ ಐದು ವರ್ಷದೊಳಗಿನ ಎಲ್ಲಾ ಮಕ್ಕಳನ್ನು ಪೋಲಿಯೊ ವೈರಸ್ ವಿರುದ್ಧ ರಕ್ಷಿಸಲು ಡಿ.21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿರುವ ಕುರಿತು ಜಿಲ್ಲೆಯಾದ್ಯಂತ ವ್ಯಾಪಕ ಪ್ರಚಾರ ನೀಡಲು ಕ್ರಮವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲೆಯಲ್ಲಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆಯ ಸಿಬ್ಬಂದಿ ಹೆಚ್ಚಿನ ರೀತಿಯಲ್ಲಿ ಪೋಷಕರಿಗೆ ಮನವರಿಕೆ ಮಾಡಿಕೊಡಬೇಕು ಎಂದು ತಿಳಿಸಿದರು.

2011 ರ ಜ.13 ರಂದು ಭಾರತದಲ್ಲಿ ಪೋಲಿಯೋ ಕೊನೆಯ ಪ್ರಕರಣ ವರದಿಯಾದ ನಂತರ ಇಲ್ಲಿಯವರೆಗೆ ನಿರಂತರ ನಿಗಾವಣೆಯೊಂದಿಗೆ 5 ವರ್ಷದೊಳಗಿನ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಮೂಲಕ ಸತತ 14 ವರ್ಷಗಳಿಂದ ಪ್ರಕರಣಗಳು ವರದಿಯಾಗಿರುವುದಿಲ್ಲ, ಇದನ್ನು ಉಳಿಸಿಕೊಳ್ಳಲು ಪ್ರತಿ ಮಗುವಿಗೂ ಲಸಿಕೆ ಹಾಕಿಸಬೇಕು ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ತಾಲ್ಲೂಕಿನ ವಸತಿ ಪ್ರದೇಶಗಳು, ವಲಸೆ ಪ್ರದೇಶಗಳು, ಕಟ್ಟಡ ನಿರ್ಮಾಣ ಪ್ರದೇಶಗಳು, ಇಟ್ಟಿಗೆ ಬಟ್ಟಿ, ಕುರಿಗಾಯಿಗಳು ತಂಗಿರುವ ಸ್ಥಳಗಳು, ಕೊಳಚೆ ಪ್ರದೇಶಗಳು ತೋಟದ ಮನೆ, ದೊಡ್ಡಿ, ಹಟ್ಟಿ, ಕ್ಯಾಂಪ್‌ಗಳು, ನಗರಗಳಲ್ಲಿನ ಅಪಾರ್ಟ್ ಮೆಂಟ್ ಗಳು ಸೇರಿದಂತೆ ಮಕ್ಕಳ ಸಂಖ್ಯೆಯನ್ನು ಪಟ್ಟಿ ಮಾಡಿಟ್ಟುಕೊಂಡು ಈ ಹಿಂದೆ ಹಲವು ಬಾರಿ ಪೋಲಿಯೋ ಹನಿ ಹಾಕಿಸಿದ್ದರೂ ಸಹ ಪಾಲಕರು ತಮ್ಮ ಮಕ್ಕಳಿಗೆ ತಪ್ಪದೇ ಎರಡು ಹನಿ ಪೋಲಿಯೋ ದ್ರಾವಣ ಹಾಕಿಸಲು ತಿಳಿಸಬೇಕು ಎಂದರು.

# ಡಾ. ಎ.ಎಸ್ ಭದ್ರಶೆಟ್ಟಿಗೆ ಚಿನ್ನದ ನಾಡು ಪ್ರಶಸ್ತಿ

**ಕಲಬುರಗಿ,ನ.27–** ನವದೆಹಲಿಯ ರಾಷ್ಟ್ರೀಯ ಭ್ರಷ್ಟಾಚಾರ ನಿಗ್ರಹ ಮತ್ತು ಕಾರ್ಯಾಚರಣೆ ಸಮಿತಿಯ ದಕ್ಷಿಣ ಭಾರತ ಅಧ್ಯಕ್ಷ ಡಾ ಎ ಎಸ್ ಭದ್ರಶೆಟ್ಟಿ ಅವರ ಸಾಮಾಜಿಕ ಸೇವೆ ಗಮನಿಸಿ ಕಲಬುರಗಿಯ ಚಿನ್ನದ ನಾಡು ಕರುನಾಡು ಜನಪರ ಅಭಿವೃದ್ಧಿ ಸಮಿತಿ ಅಧ್ಯಕ್ಷ ನಿಂಗಣ್ಣ ಉದನೂರು ಮತ್ತು ಅತಿಥಿಗಳು ಇತ್ತೀಚೆಗೆ ಪತ್ರಿಕಾ ಭವನದಲ್ಲಿ ಏರ್ಪಡಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಚಿನ್ನದ ನಾಡು ಪ್ರಶಸ್ತಿಯನ್ನು ನೀಡಿ ಗೌರವಿಸಿದರು. ಸಮಾರಂಭದಲ್ಲಿ ರಾಷ್ಟ್ರೀಯ ಭ್ರಷ್ಟಾಚಾರ ನಿಗ್ರಹ ಪಡೆಯ ಪದಾಧಿಕಾರಿಗಳಾದ ಸುರೇಶ್ ಕಲಶೆಟ್ಟಿ, ವಿಜಯಕುಮಾರ್ ಬಿರಾದಾರ, ಬಿ ಆರ್ ಚವ್ಹಾಣ, ಶರಣಬಸಪ್ಪ ರಾಂಪುರೆ, ನಾಡಗೌಡ ಬಿರಾದಾರ, ಶ್ರೀಶೈಲ ಕುಮಾರ, ಶಾಮರಾವ್ ಪಾಟೀಲ್ ಮತ್ತು ವಿನೋದ ಪಾಟೀಲ್ ಅವರು ಸೇರಿದಂತೆ ಇನ್ನೂ ಅನೇಕರು ಉಪಸ್ಥಿತರಿದ್ದರು.



# ಜೆಎಸ್‌ಡಬ್ಲ್ಯೂ ಟೌನ್‌ಶಿಪ್‌ನಲ್ಲಿ ಕರಡಿ ಸೆರೆ

**ಬಳ್ಳಾರಿ,ನ.27–** ಸಂಡೂರಿನ ತೋರಣಗಲ್ಲಿನ ಜೆಎಸ್‌ಡಬ್ಲ್ಯೂ ಟೌನ್‌ಶಿಪ್ ನಲ್ಲಿ ಹಲವಾರು ದಿನಗಳಿಂದ ಕಾಣಿಸಿಕೊಳ್ಳುತ್ತಿದ್ದ ಕರಡಿಯನ್ನು ಮಂಗಳವಾರ ಸೆರೆ ಹಿಡಿಯಲಾಗಿದೆ.

ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಮೇರೆಗೆ ಬಳ್ಳಾರಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸಂಡೂರು ಪಶು ವೈದ್ಯಾಧಿಕಾರಿಗಳ ಸಮಕ್ಷಮದಲ್ಲಿ ಸೆರೆ ಹಿಡಿಯಲಾಗಿದೆ.

ಬನ್ನೇರುಘಟ್ಟ ವನ್ಯಜೀವಿ ಕರಡಿ ರಕ್ಷಣಾ ಕೇಂದ್ರ ಸಹಕಾರದೊಂದಿಗೆ ಅರವಳಿಕೆ ನೀಡಿ ಜಿಪಿಎಸ್ ಆಧಾರಿತ ರೇಡಿಯೋ–ಕಾಲರ್ ಐಡಿ ಅಳವಡಿಸಿ ಬೆಂಗಳೂರಿನ ಮುಖ್ಯ ವನ್ಯಜೀವಿ ಪರಿಪಾಲಕರ ಅನುಮತಿ ಪಡೆದು ಸೂಕ್ತವಾದ ಅರಣ್ಯ ಪ್ರದೇಶದಲ್ಲಿ ಬಿಡುಗಡೆ ಮಾಡಲಾಗಿದೆ.



ಕಾರ್ಯಾಚರಣೆಯನ್ನು ವಲಯ ಅರಣ್ಯಾಧಿಕಾರಿ, ಸಂಡೂರು ದಕ್ಷಿಣ ವಲಯ ಹಾಗೂ ಸಿಬ್ಬಂದಿಯವರು ಜೊತೆಗೂಡಿ ಕಾರ್ಯಗತಗೊಳಿಸಿದ್ದಾರೆ ಎಂದು ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್.ಬಸವರಾಜ ಅವರು ತಿಳಿಸಿದ್ದಾರೆ.

ಯುವ ಮಾರ್ಗ

ಶುಕ್ರವಾರ: 28-11-2025

## ಅರಕೇರಾ ಶ್ರೀ ಸೂಗೂರೇಶ್ವರ ಸ್ವಾಮಿ ಜಾತ್ರಾ ಅದ್ದೂರಿಯಾಗಿ ರಥೋತ್ಸವ ಎಳೆದು ಸಂಭ್ರಮಿಸಿದ ಭಕ್ತರು



**ಅರಕೇರಾ,ನ.27–**ಭಕ್ತರ ಆರಾಧ್ಯ ದೈವ ಪಟ್ಟಣದ ಶ್ರೀ ಸೂಗೂರೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ರಥೋತ್ಸವಹಿರೇಮಠದ ಚಂದ್ರಶೇಖರಯ್ಯ ಸ್ವಾಮಿ ಸಾನಿಧ್ಯ ವಹಿಸಿದ್ದರು. ಸಹಸ್ರಾರು ಭಕ್ತರ ಸಮ್ಮುಖದಲ್ಲಿ ವಿಜೃಂಬಣೆಯಿಂದ ರಥೋತ್ಸವ ಬುಧುವಾರ ಸಂಜೆ ಜರುಗಿತು.

ಜಾತ್ರೆ ನಿಮಿತ್ಯ ದೇವಸ್ಥಾನದಲ್ಲಿ ಬೆಳಗ್ಗೆಯಿಂದ ವಿಶೇಷ ಪೂಜೆ, ಅಭಿಷೇಕ ಸೇರಿ ನಾನಾ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ರಥೋತ್ಸವವು ಹಸಿರು ತೋರಣ, ತೆಂಗಿನ ಗರಿ, ಬಾಳೆಗೊನೆ, ಗುಲಾಬಿ, ಸೇವಂತಿಗೆ, ಚೆಂಡು ಹೂ, ನಾಗಸಂಪಿಗೆ, ಡೇರೆ ಹೂಗಳಿಂದ ಸೇರಿದಂತೆ ಬೃಹತ್ ಆಕಾರದ ಪೇಪಾರ ಹೂ, ರುದ್ರಾಕ್ಷಿ ಹಾರಗಳಿಂದ ಶೃಂಗಾರ ಮಾಡಲಾಗಿತ್ತು.

ಸಂಜೆ ರಥಕ್ಕೆ ದೇವಸ್ಥಾನದಿಂದ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಸಕಲ ವಾದ್ಯ ಮೇಳಗಳೊಂದಿಗೆ ಸುಮಂಗಲಿಯರು ಕಳಸ ಹಿಡಿದು ರಥದ ಸನ್ನಿಧಿಗೆ ಕರೆದೊಯ್ಯಲಾಯಿತು. ಸುತ್ತ ಮುತ್ತಲಿನ ಹಳ್ಳಿಗಳಿಂದ ಅಪಾರ ಭಕ್ತರು ಭಾಗವಹಿಸಿದ್ದರು. ಉತ್ತುತ್ತಿ, ಬಾಳೆಹಣ್ಣು ಎಸೆದು ಭಕ್ತರು ಸಂಭ್ರಮಿಸಿದರು. ಶ್ರೀ ಸೂಗೂರೇಶ್ವರ ಜಯಘೋಷಗಳನ್ನು ಕೂಗುವ ಮೂಲಕ ರಥವನ್ನು ಶ್ರೀ ಬಸವಣ್ಣನ ಪಾದದ ಕಟ್ಟೆಯವರೆಗೆ ಎಳೆದರು.

ರಂಗು ರಂಗಿನ ಆಕಾಶ ಪಟಾಕಿಗಳನ್ನು ಸಿಡಿಸುವ ಮೂಲಕ ನೆರೆದಿದ್ದ ಭಕ್ತರ ಗಮನಸೆಳೆದವು. ಜಾತ್ರೆ ನಿಮಿತ್ತ ಅನ್ನಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು. ದೇವದುರ್ಗ ಪೊಲೀಸ್ ಠಾಣೆ ಅಧಿಕಾರಿಗಳು ಬಿಗಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು. ಹಿರೇಮಠದ ಚಂದ್ರಶೇಖರಯ್ಯ ಸ್ವಾಮಿ ಸಾನಿಧ್ಯ ವಹಿಸಿದ್ದರು.

ಮುಖಂಡರಾದ ರಾಚಯ್ಯ ಸ್ವಾಮಿ ಮಠಪತಿ, ಗೋಪಿಕೃಷ್ಣ ಗುರುವಿನ, ಜಿಪಂ ಮಾಜಿ ಸದಸ್ಯ ಸತ್ಯನಾರಾಯಣ ನಾಯಕ ಪೋಲಿಸ್ ಪಾಟೀಲ್, ಕೆ.ಅನಂತರಾಜ ನಾಯಕ, ಆರ್‌ಕೆಡಿಸಿಸಿ ಬ್ಯಾಂಕ್ ನಿರ್ದೇಶಕ ಎ.ರಾಜಶೇಖರ ನಾಯಕ, ಪ್ರಮುಖರಾದ ತಿಮ್ಮಪ್ಪ ನಾಯಕ ಪೋಲಿಸ್ ಪಾಟೀಲ್, ಚಂದ್ರಶೇಖರ ಶೆಟ್ಟಿ, ಸೀತಣ್ಣ ನಾಯಕ ಗುರಿಕಾರ, ವೆಂಕಟೇಶ ನಾಯಕ ದೊರೆ, ಬಸವರಾಜ ಪೂಜಾರಿ, ಹನುಮಂತ್ರಾಯ(ಹಮ್ಮು) ಪೂಜಾರಿ ಬಸವರಾಜ ಕ್ವಾಟೆ ದೊರೆ, ಶೇಖರಪ್ಪ ಗೌಡ ಮಾಲಿ ಪಾಟೀಲ್, ಸಿದ್ದಾರ್ಥ ಹವಲ್ದಾರ್,ವರದರಾಜನಾಯಕ ಮೈಹಿಬೂಬಸಾಬಖಾಜಿ ರಾಜುಕುಮಾರಕುರುಕುಂದಿ ಮುದ್ರಶೆಟ್ಟಿ..ಗ್ರಾಮ ಪಂಚಾಯತ ಅಭಿವೃದ್ದಿಅಧಿಕಾರಿಗಳಾದವೆಂಕೋಬ ನಾಯಕ.ಗ್ರಾಮಪಂಚಾಯತ ಅಧ್ಯಕ್ಷರು ಉಪಾದ್ಯಕ್ಷರುಸರ್ವಸದಸ್ಯರು,ಗಂಗಯ್ಯಸ್ವಾಮಿ. ಡಾ.ಎಚ್.ಎ.ನಾಡಗೌಡ. ಜಿ.ಬೂದೇಪ್ಪಸಾಹುಕಾರ,ಕೆ.ಮಲ್ಲಪ್ಪಸಾಹುಕಾರ, ಮಲ್ಲಿಕಾರ್ಜುನಸಾಹುಕಾರ ಗುಡಿ, ಸಿದ್ದಪ್ಪಮಾದ್ವರ, ಶಂಕ್ರಪ್ಪಸಾಹುಕಾರ, ಡಾ ಸಂಜಯಬಾವಿಕಟ್ಟಿ ಡಾ.ರಾಘವೇಂದ್ರವಡಿಗೇರಾ ರಥೋತ್ಸವ ಶಿಲ್ಪಿ ಅರವಿಂದಪ್ಪ ಕೂಡಲಸಂಗಮ ಹಟ್ಟಿ ಸೇರಿದಂತೆ ಪಟ್ಟಣದ ಗ್ರಾಮಸ್ಥರು ಸುತ್ತಮುತ್ತಲ್ಲಿನ ಭಕ್ತಾದಿಗಳು ಸೇರಿದಂತೆ ಅಪಾರ ಭಕ್ತಾಧಿಗಳು ಪಾಲುಗೊಂಡಿದ್ದರು.

## ಪ್ರಜಾಪ್ರಭುತ್ವದ ಬೆನ್ನೆಲುಬು ಸಂವಿಧಾನ



**ಕಲಬುರಗಿ,ನ.27–**ಭಾರತದ ಸಂವಿಧಾನ ಪ್ರಜಾಪ್ರಭುತ್ವದ ಬೆನ್ನೆಲುಬಾಗಿದ್ದು, ಅದು ನಮ್ಮ ದೇಶದ ಹೃದಯ ಮಿಡಿತವಾಗಿದೆ ಎಂದು ಸಂಸ್ಕಾರ ಪ್ರತಿಷ್ಠಾನದ ನಿರ್ದೇಶಕ ವಿಠ್ಠಲ್ ಚಿಕಣಿ ಅಭಿಪ್ರಾಯಪಟ್ಟರು.

ನಗರದ ಶ್ರೀಯಾನ್ ಕಿವುಡ ಮತ್ತು ಮೂಕ ಮಕ್ಕಳ ವಸತಿಯುತ ಶಾಲೆಯಲ್ಲಿ ಸಂವಿಧಾನ ಸಂರಕ್ಷಣಾ ದಿನದ ಅಂಗವಾಗಿ ಬುಧವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಸಂವಿಧಾನದ ಆಶಯದಂತೆ ಸಮಾಜದಲ್ಲಿ ನ್ಯಾಯ, ಸಮಾನತೆ ತರುವ ಹೊಣೆಗಾರಿಯನ್ನು ಮೆರೆಯಬೇಕಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಸಂಸ್ಥಾಪಕ ಅಧ್ಯಕ್ಷ ರಾಜು ಶಖಾಪುರ ಮಾತನಾಡಿದರು.

ಶಾಲೆಯ ಸಿಬ್ಬಂದಿ ವಿಜಯಲಕ್ಷ್ಮೀ ಮಾಳಗೆ, ಜ್ಯೋತಿ, ಲಕ್ಷ್ಮೀ, ವಿನಯಕುಮಾರ, ಮಹೇಶ, ಮಹಾಂತೇಶ, ಕೃಷ್ಣ, ದಶರಥ, ಶಿವಶರಣಪ್ಪ ಶಖಾಪುರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ವಿಶೇಷ ಚೇತನ ಮಕ್ಕಳಿಗೆ ನೋಟ್ ಬುಕ್ ಮತ್ತು ಪೆನ್ ವಿತರಿಸಲಾಯಿತು.

# ತಜ್ಞವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ಗ್ರಾಮಸ್ಥರು ಸದುಪಯೋಗ ಪಡೆದುಕೊಳ್ಳಿ ಡಾ.ಗೀತಾಂಜಲಿ

ಯುವಮಾರ್ಗ ಸುದ್ದಿ

**ದೇವದುರ್ಗಾ,ನ.27–** ದೇವದುರ್ಗಾ ತಾಲೂಕಿನ ಗಬ್ಬೂರು ಗ್ರಾಮದಲ್ಲಿ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಪಿಪಿಹೆಚ್‌ಎಫ್ ಜಿಇ ಹೆಲ್ತ್ ಕೇರ್ ಸಂಯುಕ್ತಾಶ್ರಯದಲ್ಲಿ ಉಚಿತ ಮಹಿಳಾ ಕ್ಷೇಮಾ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.



ಪ್ರಾಥಮಿಕ ಆರೋಗ್ಯ ಕೇಂದ್ರ ಗಬ್ಬೂರ ವೈದ್ಯಾಧಿಕಾರಿ ಡಾ ಗೀತಾಂಜಲಿ ಉದ್ಘಾಟಿಸಿ ಮಾತನಾಡಿ ನಮ್ಮ ಆಸ್ಪತ್ರೆಯಲ್ಲಿ ಒಬ್ಬ ವೈದ್ಯರು ಎಲ್ಲಾ ಕಾಯಿಲೆಗಳನ್ನ ತಪಾಸಣೆ ಮಾಡುತಿದ್ದರು, ಆದರೆ ಪಿಪಿಹೆಚ್‌ಎಫ್ ಜಿಈ ಹೆಲ್ತ್ ಕೇರ್ ಸಂಸ್ಥೆಯವರು ನುರಿತ ತಜ್ಞವೈದರನ್ನ ಗ್ರಾಮಕ್ಕೆ ಕರೆದು ಮಧ್ಯಾಹ್ನದವರೆಗೆ ಗ್ರಾಮಸ್ಥರಿಗೆ ಆರೋಗ್ಯ ಸೇವೆ ಕೊಡಿಸುತಿದ್ದಾರೆ. ಸಾವಿರಾರು ರೂ.ಖರ್ಚು ಉಳಿಸುವ ಕೆಲಸ ಮಾಡುತಿದ್ದಾರೆ. ಮಹಿಳಾ ವೈದ್ಯರಿಂದ ಆರೋಗ್ಯ ತಪಾಸಣೆ , ಬಿಪಿ ,ಶುಗರ್ ,ಹಲ್ಲು ತಪಾಸಣೆ, ಕಣ್ಣು, ಹೆಚ್‌ಬಿ ಪರೀಕ್ಷೆ,ಎಲ್‌ಎಫ್‌ಟಿ/ಆರ್‌ಎಫ್‌ಟಿ, ಹೆಚ್‌ಬಿಎ1ಸಿ ತಪಾಸಣೆ, ಮಾನಸಿಕ ಆಪ್ತ ಸಮಾಲೋಚಕರಿಂದ ಮಾಹಿತಿ ಮತ್ತು ಸಲಹೆ, ಗರ್ಭಿಣಿಯರಿಗೆ ಪೌಷ್ಟಿಕ ಆಹಾರದ ಬಳಕೆ ಕುರಿತು ಮಾಹಿತಿ ನೀಡಲಾಗುತ್ತಿದೆ. ಇವೆಲ್ಲವೂ ಒಂದೆ ಕಡೆ ದೊರೆಯುತ್ತಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಗ್ರಾಮಸ್ಥರಿಗೆ ಹೇಳಿದರು.

ನಂತರ ರವಿ ಶುಕ್ಲಾ ಟಿಬಿ ಮೇಲ್ವಿಚಾರಕರು ಮಾತನಾಡಿ ಮನುಷ್ಯನಿಗೆ ಆರೋಗ್ಯಕ್ಕಿಂತ ದೊಡ್ಡದು ಮತ್ತೊಂದು ಇಲ್ಲ, ಪಿಪಿಹೆಚ್‌ಎಫ್‌ಜಿಇ ಸಂಸ್ಥೆಯವರು ಗ್ರಾಮೀಣ ಮಹಿಳೆಯರಿಗೆ ಉಚಿತ ಆರೋಗ್ಯ ಸೇವೆಯನ್ನಿಟ್ಟುಕೊಂಡು ಬಡಜನರ ಮಧ್ಯಮ ವರ್ಗದ ಜನರ ನೆರವಿಗೆ ಬಂದಿದ್ದಾರೆ ಎಂದರು. ಪಿಪಿಹೆಚ್‌ಎಫ್ ಜಿಇಹೆಲ್ತ್ ಕೇರ್ ಸಂಸ್ಥೆಯ ಕಾರ್ಯಕ್ರಮ ವ್ಯವಸ್ಥಾಪಕರು ಮಲ್ಲೈಕಾ ಅಮೀನ ರವರು ಪ್ರಾಸ್ತವಿಕವಾಗಿ ಮಾತನಾಡಿ ಗ್ರಾಮೀಣ ಜನರ ಆರೋಗ್ಯ ಹಿತದೃಷ್ಟಿಯಿಂದ ನಮ್ಮ ಸಂಸ್ಥೆವತಿಯಿಂದ ಮಹಿಳಾ ಕ್ಷೇಮಾ ತಪಾಸಣೆ ಶಿಬಿರಗಳನ್ನ ಕೈಗೊಂಡು ಪ್ರಾಥಮಿಕ ಹಂತದ ಕಾಯಿಲೆಗಳ ತಪಾಸಣೆ ಜೊತೆಗೆ ಸೂಕ್ತ ಸಲಹೆ ಮಾಡುತ್ತಿದ್ದೇವೆ,ಹೆಚ್ಚಿನ ಸಂಖ್ಯೆಯಲ್ಲಿ ಜನರು ಭಾಗಿಯಾಗಿ ಆರೋಗ್ಯ ತಪಾಸಣೆ ಮಾಡಿಕೊಂಡು ಈ ಶಿಬಿರ ಯಶಸ್ವಿಗೊಳಿಸಬೇಕು ಎಂದು ಜನರಲ್ಲಿ ಕೇಳಿಕೊಂಡರು.

ಈ ತಪಾಸಣೆ ಶಿಬಿರದಲ್ಲಿ ಭಾಗಿಯಾಗಿದ್ದ ಶಿಬಿರಾರ್ಥಿಗಳಿಗೆ ಆಭಾ ಕಾರ್ಡ ನೊಂದಣಿ, ಉಚಿತ ಮಹೆಂದಿ ಬಿಡಿಸಿ ಪೌಷ್ಟಿಕ ಆಹಾರದ ಸೇವನೆ ಕುರಿತು ಮಾಹಿತಿ ತಿಳಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸುಶಲೇಂದ್ರ ನೇತ್ರಾಧಿಕಾರಿ, ರವಿ ಶುಕ್ಲಾ ಟಿಬಿ ಮೇಲ್ವಿಚಾರಕರು, ಸುವರ್ಣ ಎನ್‌ಸಿಡಿ ಮೇಲ್ವಿಚಾರಕರು, ಶಮೀಮ್ ಬೇಗಂ ಫಾರ್ಮಸಿ ಅಧಿಕಾರಿ, ಶಿವಶರಣ ಎಲ್‌ಟಿಒ, ನರಸಿಂಹ ಎಲ್‌ಟಿಒ, ಬಸವ ಎಲ್‌ಟಿಒ, ರಾಮಕೃಷ್ಣ ಎಚ್‌ಐಒ, ಅಭಿಜಿತ್ ಸಿಎಚ್‌ಒ, ರವೀಂದ್ರ ಎಚ್‌ಐಒ, ಮೇಘನಾ, ಕೆಂಚಮ್ಮ, ರೇಖಾ, ನರ್ಸಿಂಗ್ ಅಧಿಕಾರಿ, ಭೀಮಣ್ಣ ಹಾಗೂ ಪಿಪಿಹೆಚ್ ಎಫ್‌ನ ಸಿಬ್ಬಂಧಿ ನರಸಮ್ಮ ರಾಮಮೂರ್ತಿ ಪೂಜಾ,ಸಲ್ಮಾ ಹಾಗೂ ಆಶಾ ಕಾರ್ಯಕರ್ತರು ನೂರಾರು ಜನರು ಶಿಬಿರದಲ್ಲಿ ಭಾಗಿಯಾಗಿ ಯಶಸ್ವಿಗೊಳಿಸಿದರು.

# ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ವತಿಯಿಂದ ಮಾಜಿ ಯೋಧರಿಗೆ ಹಾಗೂ ರೈತರಿಗೆ ಸನ್ಮಾನ




ಯುವಮಾರ್ಗ ಸುದ್ದಿ

**ಮಾನ್ವಿ:** ಪಟ್ಟಣದ ಪಟ್ಟಣದ ಪಂಪಾ ಉದ್ಯಾನವನದಲ್ಲಿ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ವತಿಯಿಂದ ಸಂವಿಧಾನ ದಿನ ಅಂಗವಾಗಿ 3ನೇ ವರ್ಷದ ಮಾಜಿ ಯೋಧರು, ಸೈನಿಕರು,ರೈತರಿಗೆ ಸನ್ಮಾನ ಕಾರ್ಯಕ್ರಮಕ್ಕೆ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಚಾಲನೆ ನೀಡಿ ಮಾತನಾಡಿ, ದೇಶವನ್ನು ಕಾಯುವ ಯೋಧರನ್ನು, ಹಾಗೂ ಆಹಾರವನ್ನು ನೀಡುವ ರೈತರಿಗೆ ಪ್ರತಿಯೊಬ್ಬರು ಕೂಡ ಗೌರವ ಸಲ್ಲಿಸಬೇಕು ಹನುಮಂತ ಕೋಟೆಯವರು ಕಳೆದ ಮೂರು ವರ್ಷಗಳಿಂದ ಸರ್ವಧರ್ಮ ಸೇವಾ ವೆಲ್ಫೇರ್ ಟ್ರಸ್ಟ್ ಮೂಲಕ ಅನೇಕ ಸಾಮಾಜಿಕ ಸೇವ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದಾರೆ ಅವರಿಗೆ ನಮ್ಮೆಲರ ಸಹಕಾರ ಅಗತ್ಯವಾಗಿದೆ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಸಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲಿ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷರಾದ ಚೆನ್ನಾರೆಡ್ಡಿ, ಮಾಜಿ ಸೈನಿಕರಾದ ಶಿವಯ್ಯ ಸ್ವಾಮಿ,ಸೈಯಾದ್ ಮುಕ್ತಾರ,ಕೃಷ್ಣ ಮೂರ್ತಿ, ಬಸವರಾಜ್ ಮುಸ್ಟೂರು, ಹನುಮಂತ ಜಲ್ಲಿ,ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಯೋಧರನ್ನು,ರೈತರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್, ಭಾರತೀಯರ ಸೇವಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ರಾಮಚಂದ್ರ ಹೂಡಿ ಚಿನ್ನಿ, ಯುವಶಕ್ತಿ ಬೆಂಗಳೂರಿನ ಸೂರಿ, ಭಾರತೀಯರ ಸೇವಾ ಸಮಿತಿಯ ಜಿಲ್ಲಾಧ್ಯಕ್ಷರಾದ ಬಿ.ತಿಮ್ಮಪ್ಪ, ,ಕ.ಸಾ.ಪ,ಜಿಲ್ಲಾ ಗೌರವ ಕಾರ್ಯದರ್ಶಿ ತಾಯಪ್ಪ ಬಿ.ಹೋಸೂರು, ಸೇರಿದಂತೆ ಇನ್ನಿತರರು ಇದ್ದರು.

# ಎಲೆಬಿಚ್ಚಾಲಿ ಕ್ಯಾಂಪ್ ಶಾಲೆಯಲ್ಲಿ ನೂತನ ಎಸ್‌ಡಿಎಂಸಿ ರಚನೆ



ಯುವಮಾರ್ಗ ಸುದ್ದಿ

**ಎಲೆಬಿಚ್ಚಾಲಿ:** ಇಲ್ಲಿನ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ (ಕ್ಯಾಂಪ್) 2025–26ನೇ ಸಾಲಿನ ನೂತನ ಶಾಲಾಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ (ಎಸ್‌ಡಿಎಂಸಿ) ರಚನಾ ಸಭೆಯು ಗುರುವಾರ ಯಶಸ್ವಿಯಾಗಿ ಜರುಗಿತು.

ಸಭೆಯಲ್ಲಿ ಒಟ್ಟು 18 ಜನ ಚುನಾಯಿತ ಪ್ರತಿನಿಧಿಗಳು, ಮೂವರು ನಾಮನಿರ್ದೇಶಿತ ಸದಸ್ಯರು ಹಾಗೂ ಮೂವರು ಪದನಿಮಿತ್ತ ಸದಸ್ಯರನ್ನು ಆಯ್ಕೆ ಮಾಡಲಾಯಿತು.

**ಅವಿರೋಧ ಆಯ್ಕೆ:** ನೂತನ ಸಮಿತಿಯ ಅಧ್ಯಕ್ಷರನ್ನಾಗಿ ಹುಲಿಗೆಪ್ಪ ಹಾಗೂ ಉಪಾಧ್ಯಕ್ಷರನ್ನಾಗಿ ಭೀಮರಾಯ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಸದಸ್ಯರು, ಶಾಲೆಯ ಸರ್ವತೋಮುಖ ಅಭಿವೃದ್ಧಿಗೆ ಎಲ್ಲ ರೀತಿಯ ಸಹಕಾರ ನೀಡುವುದರೊಂದಿಗೆ, ಶಾಲೆಯ ಏಳಿಗೆಗಾಗಿ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ಭರವಸೆ ನೀಡಿದರು. ಇದೇ ವೇಳೆ, ಶಾಲೆಯ ಅಭಿವೃದ್ಧಿಗೆ ಶ್ರಮಿಸಿದ ನಿರ್ಗಮಿತ ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರಿಗೆ ಧನ್ಯವಾದಗಳನ್ನು ಸಲ್ಲಿಸಲಾಯಿತು.

ಸಿ.ಆರ್.ಪಿ ಶಶಿಧರ ಕಟ್ಟಿಮನಿ, ಮುಖ್ಯ ಗುರುಗಳಾದ ಜಯಶ್ರೀ ಹಾಗೂ ಶಿಕ್ಷಕ ವೃಂದದವರು ನೂತನ ಪದಾಧಿಕಾರಿಗಳನ್ನು ಸ್ವಾಗತಿಸಿ, ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಸಾಬಣ್ಣ ಗಟ್ಟುಬಿಚ್ಚಾಲಿ, ಹಾಗೂ ಶಿಕ್ಷಣ ಪ್ರೇಮಿಗಳಾದ ನಾಗಪ್ಪ, ಭೀಮ, ಬಜಾರಪ್ಪ, ತಾಯಮ್ಮ, ಚಂದ್ರಮ್ಮ, ನರಸಮ್ಮ, ಶ್ವೇತಮ್ಮ, ಸುಜಾತ, ಮಹಾದೇವ, ರಾಮು, ಯೇಸುರಾಜ, ನರಸಿಂಹ, ಭೀಮೇಶ, ಕಂಬಯ್ಯ, ವಿಜಯಲಕ್ಷ್ಮಿ, ಸುಜಾತ ಎಸ್, ದಾದೆಮ್ಮ, ರಾಮಲಿಂಗಮ್ಮ ಸೇರಿದಂತೆ ಗ್ರಾಮ ಪಂಚಾಯತಿ ಸದಸ್ಯರು, ಪಾಲಕರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಆಲ್ದಾಳ ಶ್ರೀ ಭದ್ರಕಾಳಿ ಶ್ರೀ. ವೀರಭದ್ರೇಶ್ವರಸ್ವಾಮಿಗೆ ವೈಭವದ ಕಲ್ಯಾಣೋತ್ಸವ



ಯುವಮಾರ್ಗ ಸುದ್ದಿ

**ಮಾನ್ವಿ,ನ.27–** ತಾಲೂಕಿನ ಆಲ್ದಾಳ ಗ್ರಾಮದಲ್ಲಿನ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರ ದೇವಾಸ್ಥಾನದಲ್ಲಿ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರ ಜಾತ್ರ ಮಹೋತ್ಸವ ಅಂಗವಾಗಿ 4 ನೇ ವರ್ಷದ ಕಲ್ಯಾಣೋತ್ಸವವನ್ನು ಗ್ರಾಮದ ಭಕ್ತರು ಶ್ರದ್ದೆ ಭಕ್ತಿಯಿಂದ ನೆರವೇರಿಸಿದರು. ಕಲ್ಯಾಣೋತ್ಸವ ಅಂಗವಾಗಿ ಬೆಳಿಗ್ಗೆ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರಸ್ವಾಮಿಗೆ ಮಹಾರುದ್ರಭಿಷೇಕ ಪೂಜೆ, ಹಾಗೂ ಸಹಸ್ರ ಬಿಲ್ವಾರ್ಚನೆ, ಮಹಾಮಂಗಳರತಿ ನೇರವೇರಿಸಲಾಯಿತು ನಂತರ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರ ಉತ್ಸವ ಮೂರ್ತಿಗೆ ಶಾಸ್ತ್ರೋಕ್ತವಾಗಿ ದೇವಸ್ಥಾನದ ಆರ್ಚಕರು ಕಲ್ಯಾಣೋತ್ಸವವನ್ನು ನೆರವೇರಿಸಿದರು. ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಸಾವಿರಾರು ಭಕ್ತರು ಕಲ್ಯಾಣೋತ್ಸವದಲ್ಲಿ ಭಾಗವಹಿಸಿದರು. ದೇವಸ್ಥಾನದ ನೂತನ ಮಹಾದ್ವಾರವನ್ನು ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತ ಲಿಂಗಮಹಾಸ್ವಾಮಿಗಳು ಲೋಕರ್ಪಣೆ ನಡೆಸಿ ಆರ್ಶೀವಾಚನ ನೀಡಿದರು.

ದೇವಸ್ಥಾನದಲ್ಲಿ ನ.30 ರಂದು ನಡೆಯುವ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರ ಜಾತ್ರ ಮಹೋತ್ಸವ ಅಂಗವಾಗಿ,ಗೋಪುರಕ್ಕೆ ಮತ್ತು ರಥಕ್ಕೆ ಕಳಸರೋಹಣ ಹಾಗೂ ಹೂವಿನ ಅಲಂಕಾರ ನಡೆಯಲಿದೆ. ಸಂಜೆ ಶ್ರೀ ಭದ್ರಕಾಳಿ ಶ್ರೀ ವೀರಭದ್ರೇಶ್ವರ ಸ್ವಾಮಿಯ ಉತ್ಸವ ಮೂರ್ತಿಯನ್ನು, ನಂದಿಧ್ವಜ, ಕಳಸ, ಪುರವಂತಿಕೆಯೊಂದಿಗೆ ಮೆರವಣಿಗೆ ನಡೆಸಿ ರಥೋತ್ಸವ ನಡೆಯಲಿದೆ ಹರಕೆ ಹೊತ್ತಂತಹ ಭಕ್ತರು ಅಗ್ನಿಕುಂಡ ಪ್ರವೇಶಿಸಿ ಹರಕೆ ತಿರಿಸಲಿದ್ದಾರೆ. ಯಮನೂರು ಗ್ರಾಮದ ಬಸವೇಶ್ವರ ಸಂಘದ ರುದ್ರಮುನಿಸ್ವಾಮಿ ಹಾಗೂ ಗುರು ಶಾಂತಯ್ಯ ಸ್ವಾಮಿ ಇವರಿಂದ ಪುರವಂತಿಕೆ ಸೇವೆ ಮತ್ತು ಅಮರಪ್ಪ ಹೂಗಾರ ಸಂಗಡಿಗರಿಂದ ಶಹನಾಯಿ ಕಾರ್ಯಕ್ರಮ ನಡೆಯಲಿದೆ.

ಡಿ.1 ರಂದು ಸಂಜೆ 4ಕ್ಕೆ ನಂದಿಕೋಲು ,ಪುರವಂತಿಕೆ ಸೇವೆ, ಹಾಗೂ ಕಡುಬಿನ ಕಾಳಗ ನಡೆಯಲಿದೆ.ಎಂದು ಶ್ರೀ ಭದ್ರಕಾಳಿ, ಶ್ರೀ ವೀರಭದ್ರೇಶ್ವರ ಸದ್ಭಕ್ತ ಮಂಡಳಿ ಹಾಗೂ ಶ್ರೀ ಬಸವೇಶ್ವರ ಯುವಕ ಸಂಘದವರು ಪ್ರಕಟೆಯಲ್ಲಿ ತಿಳಿಸಿದ್ದಾರೆ.

### ಬಿ.ಎಸ್.ಪಿ.ಎಲ್. (ಬಲ್ಡೋಟ)ಕಾರ್ಖಾನೆ ತೆರೆಯಲು ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಸೇನೆ ಇದನ್ನು ವಿರೋಧಿಸುತ್ತದೆ ಉಮೇಶಗೌಡ ಅರಳಹಳ್ಳಿ

**ಸಿಂದನೂರು,ನ.27–**ಬಿ.ಎಸ್ ಪಿ.ಎಲ್ (ಬಲ್ಡೋಟ )ಕಂಪನಿಗೆ ಭೂಮಿ ಕಳೆದುಕೊಂಡ ಕೊಪ್ಪಳ ತಾಲೂಕಿನ ಗ್ರಾಮಗಳಾದ ಹಾಲವರ್ತಿ ಬಸಾಪುರ ಕಿಡದಾಳ ಬೆಳವಿನಾಳ ಮತ್ತು ಕೊಪ್ಪಳ.ಸುಮಾರು 18 ವರ್ಷಗಳಿಂದಭೂಮಿ ಕಳೆದುಕೊಂಡಿರುತ್ತಾರೆ ಆದರೆ ಇಲ್ಲಿಯವರೆಗೂ ಕಾರ್ಖಾನೆ ಪ್ರಾರಂಭವಾಗಿಲ್ಲ.

2006/2007 ರೈತರ ಭೂಮಿಯನ್ನು ದೌರ್ಜನವಾಗಿ ಕೆ.ಐ. ಎ. ಡಿ. ಬಿ( ಕರ್ನಾಟಕ ಸರ್ಕಾರ) ವಸಪಡಿಸಿಕೊಳ್ಳುತ್ತಾರೆ.

2006/07 ರಿಂದ ಭೂಮಿ ಕಳೆದುಕೊಂಡರ ರೈತರು ಹೋರಾಟ ಮಾಡುತ್ತಾನೆ ಬರ್ತಾ ಇದ್ರು . 2011/12/13/ ರಲ್ಲಿ. ಹೈಕೋರ್ಟ್ ಧಾರವಾಡ ನಲ್ಲಿ ಮರಳಿ ರೈತರ ಭೂಮಿಯನ್ನು ರೈತರಿಗೆ ನೀಡಿ ಎಂದು ಆದೇಶ ಹೊರಡಿಸಿತು..ಇದಕ್ಕೆ ಸುಮ್ಮನೆ ಕುರದೆ BALODAT ಕಾರ್ಖಾನೆ ಅವರು ಸುಪ್ರೀಂಕೋರ್ಟಿಗೆ ಕೇಸನ್ನು .ಹಾಕುತ್ತಾರೆ . ಆದರೆ ಸುಪ್ರೀಂ ಕೋರ್ಟಿಗೆ ರೈತರು.ಹೋಗದೆ ಇದ್ದ ಕಾರಣ. ಅಲ್ಲಿ ಕಾರ್ಖಾನೆ ಪರ ಆದೇಶ ಆಗುತ್ತದೆ

BSPL ಕಾರ್ಖಾನೆಗೆ ನನ್ನ ವಿರುದ್ಧ ಇದೆ.. ಅಲ್ಲಿ ರೈತರಿಗೆ ಅನ್ಯಾಯವಾಗಿದೆ ರೈತರಿಗೆ ನ್ಯಾಯ ಕೊಡಿಸಲೇಬೇಕು. ಅತಿ ಕಡಿಮೆ ಬೆಲೆಯಲ್ಲಿ ಭೂಮಿಯನ್ನುತೆಗೆದು ಕೊಂಡಿರುತ್ತಾರೆ.2006 ರಲ್ಲಿ ಭೂಮಿಯ ಬೆಲೆ.3 ಲಕ್ಷ ಇತ್ತು.ಭೂಮಿಯ ಈಗಿನ ಬೆಲೆ 48 ಲಕ್ಷ. ರೂಪಾಯಿಗೆ ಏರಿದೆ.ಇದು ರೈತರಿಗೆ ತುಂಬಾಅನ್ಯಾಯ ಅಲ್ಲಿನಿಂದಇಲ್ಲಿವರೆಗೂ ರೈತರಿಗೆ ಯಾವುದೇ ರೀತಿ ಕೆಲಸವನ್ನು ನೀಡಿರುವುದಿಲ್ಲ.

ಕಾರ್ಖಾನೆಯನ್ನು ತೆಗೆಯಲು ವೈಜ್ಞಾನಿಕವಾಗಿ ನಮ್ಮ ಸಂಘಟನೆಯ ತಕರಾರು ಇರುವುದಿಲ್ಲ ಆದರೆ ರೈತರಿಗೆ ಈಗಿನ ಭೂಮಿಯ ಬೆಲೆಯನ್ನು ಕೊಟ್ಟು ಇಲ್ಲ ಭೂಮಿಯನ್ನು ಕಳೆದುಕೊಂಡವರಿಗೆ ಸೂಕ್ತ ಪರಿಹಾರವನ್ನು ಕೊಟ್ಟು.ಕಾರ್ಖಾನೆಯನ್ನು ಪ್ರಾರಂಭಿಸಬೇಕು ಇಲ್ಲವಾದಲ್ಲಿ ನಮ್ಮ ಸಂಘಟನೆ ಉಗ್ರವಾದ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಪತ್ರಿಕೆಯ ಮೂಲಕ ಎಚ್ಚರಿಸಲಾಗುವುದು ಎಂದು ರಾಜ್ಯ ಕಾರ್ಯಧ್ಯಕ್ಷರು ಉಮೇಶ್ ಗೌಡ ಅರಳಹಳ್ಳಿ ಯವರು ಪತ್ರಿಕೆ ಹೇಳಿಕೆಯನ್ನು ಕೊಟ್ಟರು ಇದೇ ಸಂದರ್ಭದಲ್ಲಿ ಉತ್ತರ ಕರ್ನಾಟಕ ಉಪಾಧ್ಯಕ್ಷರಾದ ಕಾಜಾವನ್ನೇನೂರ್ ಹಾಗೂ ತಾಲೂಕಾಧ್ಯಕ್ಷರಾದ ರಫಿ. ಕುನ್ನಟಗಿ ಹಾಗೂ ಜಿಲ್ಲಾ ಸಹಕಾರದರ್ಶಿಯಾದ ಮಲ್ಲಿಕಾರ್ಜುನ್ ಉಪಾಧ್ಯಕ್ಷರಾದ ರಾಘು ಸಿದ್ದಪ್ಪ ಸುಲ್ತಾನ್ ಪುರ.ಶ್ರೀಕಾಂತ್ ಇನ್ನಿತರರು ಇದ್ದರು

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H